ಸಂಪುಟ 01 | ಸಂಚಿಕೆ 58 | ಗುರುವಾರ 08 ಜನವರಿ 2026 | ಪುಟ 4 | ಬೆಲೆ-2 ರೂ.

ಇರ್ಫಾನ್ ಕೆ
ಸಂಪಾದಕರು

M A ವಹಾಬ್
ಪ್ರಧಾನ ಸಂಪಾದಕರು

# ನೈಜ್ಯ ದೇಸೆ
NAIJYA DESE

ಸತ್ಯದ ದಿಕ್ಕು TRUE PATH

ಕನ್ನಡ ದಿನ ಪತ್ರಿಕೆ

ಸಿಂಧನೂರು, ಮಸ್ಕಿ ಮಾನ್ವಿ, ಲಿಂಗಸೂರು, ರಾಯಚೂರ,ದೇವದುರ್ಗ ಬಳ್ಳಾರಿ, ಕೊಪ್ಪಳ ಯಾದಗಿರಿ, ಕಲಬುರ್ಗಿ, ಬೀದರ, ವಿಜಯಪುರ. ಗದಗ, ವಿಜಯನಗರ. ಏಕಕಾಲಕ್ಕೆ ಪ್ರಕಟಣೆ

REGIONAL KANNADA DAILY MORNING

RNI code: KNKAN/25/A3581 ಮೋ: 9902277588, 9880707587, 9008787586 naijyadese@gmail.com

## ಈ ದಿನದ ವಿಶೇಷ

**1) ಭೂ ಪರಿಭ್ರಮಣ ದಿನ:** ಭೂ ಪರಿಭ್ರಮಣ ದಿನವನ್ನು ಪ್ರತಿ ವರ್ಷ ಜನವರಿ 8 ರಂದು ಆಚರಿಸಲಾಗುತ್ತದೆ, ಇದು ಫ್ರೆಂಚ್ ಭೌತಶಾಸ್ತ್ರಜ್ಞ ಲಿಯಾನ್ ಫೌಕಾಲ್ಟ್ ಅವರು 1851 ರಲ್ಲಿ ಪ್ಯಾರಿಸ್‌ನ ಪ್ಯಾಂಥಿಯಾನ್‌ನಲ್ಲಿ ಫೌಕಾಲ್ಟ್ ಪೆಂಡುಲಮ್ ಅನ್ನು ಬಳಸಿ ಭೂಮಿ ತನ್ನ ಅಕ್ಷದ ಮೇಲೆ ತಿರುಗುವುದನ್ನು ಪ್ರದರ್ಶಿಸಿದ ಐತಿಹಾಸಿಕ ಘಟನೆಯ ವಾರ್ಷಿಕೋತ್ಸವವಾಗಿದೆ. ಈ ದಿನವು ಭೂಮಿಯ ನಿರಂತರ ಚಲನೆಯ ಬಗ್ಗೆ ವೈಜ್ಞಾನಿಕ ಕುತೂಹಲವನ್ನು ಹೆಚ್ಚಿಸುತ್ತದೆ ಮತ್ತು ಫೌಕಾಲ್ಟ್ ಅವರ ಪ್ರಯೋಗದ ಮಹತ್ವವನ್ನು ಸ್ಮರಿಸುತ್ತದೆ, ಇದನ್ನು ವಿಜ್ಞಾನ ವಸ್ತುಸಂಗ್ರಹಾಲಯಗಳಲ್ಲಿ ಇಂದಿಗೂ ಕಾಣಬಹುದು. ಈ ದಿನವನ್ನು ಭೂಮಿಯ ಚಲನೆಯ ಬಗ್ಗೆ ಜಾಗೃತಿ ಮೂಡಿಸುವುದು ಮತ್ತು ವೈಜ್ಞಾನಿಕ ಅನ್ವೇಷಣೆಯನ್ನು ಪ್ರೋತ್ಸಾಹಿಸುವುದಕ್ಕೆ ಆಚರಣೆ ಮಾಡಲಾಗುತ್ತದೆ.

## ಸುಭಾಷಿತ

ಜಗತ್ತು ಬದಲಾಯಿಸಲು ಹೊರಟವನು ಸೋಲುತ್ತಾನೆ,
ತನ್ನನ್ನು ಬದಲಿಸಿ ಕೊಳ್ಳುವವನು ಜಯಿಸುತ್ತಾನೆ.
ಅಹಂಕಾರ ಕರಗಿದಾಗಲೇ ಬದುಕು ಬೆಳಗುತ್ತದೆ.

ಶ್ರೀ ಸಿದ್ಧೇಶ್ವರ ಸ್ವಾಮೀಜಿ

# ಸಿದ್ದರಾಮಯ್ಯ ಇಲ್ಲದೆ ರಾಜ್ಯದಲ್ಲಿ ಕಾಂಗ್ರೆಸ್ ಉಳಿವು ಕಷ್ಟ

## ದಾಖಲೆ ಸಿಎಂ ಅವಧಿ ದಿನದಂದು ಸಚಿವ ಡಾ. ಎಚ್.ಸಿ. ಮಹದೇವಪ್ಪ ಅಭಿಮತ

ಮೈಸೂರು: ಮುಖ್ಯಮಂತ್ರಿ ಸಿದ್ದರಾಮಯ್ಯ ಇಲ್ಲದೆ ರಾಜ್ಯ ಸರ್ಕಾರ ಮತ್ತು ಕಾಂಗ್ರೆಸ್ ಪಕ್ಷವನ್ನು ಊಹಿಸುವುದೂ ಕಷ್ಟ ಎಂದು ಜಿಲ್ಲಾ ಮೈಸೂರು ಉಸ್ತುವಾರಿ ಸಚಿವ ಡಾ.ಎಚ್.ಸಿ. ಮಹದೇವಪ್ಪ ಹೇಳಿದ್ದಾರೆ. ಡಾ.ಕೆ.ಶಿವಕುಮಾರ್ ಅಭಿನಂದನಾ ಸಮಿತಿ ಹಾಗೂ ದಲಿತ ಸಂಘಟನೆಗಳ ಒಕ್ಕೂಟದ ವತಿಯಿಂದ ನಡೆದ ವಿಧಾನ ಪರಿಷತ್‌ನ ನೂತನ ಸದಸ್ಯ ಡಾ.ಕೆ.ಶಿವಕುಮಾರ್ ಅಭಿನಂದನಾ ಕಾರ್ಯಕ್ರಮದಲ್ಲಿ ಮಾತನಾಡಿದ ಅವರು, 'ಸಿದ್ದರಾಮಯ್ಯ ಅವರಿಗೆ ಸಾಮಾಜಿಕ ಹೊಣೆಗಾರಿಕೆಯೊಂದಿಗೆ ಜವಾಬ್ದಾರಿಯೂ ಇದೆ" ಎಂದು ಹೇಳಿದರು.

"ಯಾರು ಯೋಗ್ಯರೋ, ಸಮರ್ಥರೋ ಅವರ ಕೈಯಲ್ಲಿಅಧಿಕಾರ ಇರಬೇಕು. ಸಿದ್ದರಾಮಯ್ಯ ಅವರು ಇಲ್ಲದಿದ್ದರೆ ರಾಜ್ಯದಲ್ಲಿ ಸರ್ಕಾರ ನಡೆಸುವುದು ಕಷ್ಟವಾಗಲಿದೆ. ಹೀಗಾಗಿ ಸಿದ್ದರಾಮಯ್ಯ ಪೂರ್ಣಾವಧಿಯವರೆಗೆ ಸಿಎಂ ಆಗಿರಬೇಕು" ಎಂದು ಡಾ.ಎಚ್.ಸಿ. ಮಹದೇವಪ್ಪ ಹೇಳಿದರು. "ಸಿದ್ದರಾಮಯ್ಯ ಅವರನ್ನು ಸಿಎಂ ಸ್ಥಾನದಿಂದ ಬದಲಿಸುವುದಾದರೆ ದಲಿತರಿಗೆ ಅವಕಾಶ ಕೊಡಬೇಕು ಎಂದು ಪರೋಕ್ಷವಾಗಿ ಕೇಳುತ್ತಿದ್ದಾರೆ.

ನನಗೆ, ಪರಮೇಶ್ವರ್ ಸೇರಿದಂತೆ ಕೆಲ ದಲಿತ ನಾಯಕರಿಗೆ ಸಿಎಂ ಸ್ಥಾನ ಕೊಡಿ



ಎಂದು ಎನ್ನುತ್ತಿದ್ದಾರೆ. ಆದರೆ, ಅಹಿಂದ ಸಮುದಾಯದ ಹಿತ ದೃಷ್ಟಿಯಿಂದ ಬೇರೆಯವರು ಸಿಎಂ ಆಗುವುದಕ್ಕಿಂತ, ಸಿದ್ದರಾಮಯ್ಯ ಅವರೇ ಮುಖ್ಯಮಂತ್ರಿ ಯಾಗಿರಬೇಕು. ಸಿದ್ದರಾಮಯ್ಯ ಅವರ ನಾಯಕತ್ವ ಮತ್ತು ಮುಂದಾಳತ್ವ ಅಹಿಂದ ಸಮುದಾಯಗಳಿಗೆ ಅಗತ್ಯವಾಗಿದೆ" ಎಂದು ಸಚಿವರು ಅಭಿಪ್ರಾಯಪಟ್ಟರು. 2028ರಲ್ಲೂ ಸಿದ್ದರಾಮಯ್ಯ ಅವರೇ ಮುಖ್ಯಮಂತ್ರಿ ಆಗಬೇಕು ಎಂಬ ಸಭಿಕರ ಆಗ್ರಹಕ್ಕೆ ದನಿಗೂಡಿಸಿದ ಸಚಿವ ಮಹದೇವಪ್ಪ "ಸಿದ್ದರಾಮಯ್ಯ ಅವರು ಮೂರನೇ ಬಾರಿಗೆ ಮುಖ್ಯಮಂತ್ರಿ ಯಾದರೂ ನಮ್ಮದೇನೂ ತಕರಾರು ಇಲ್ಲ. ಸಿದ್ದರಾಮಯ್ಯ ಅವರ ಮೇಲೆ ದೊಡ್ಡ ಹೊಣೆಗಾರಿಕೆ ಇದೆ. ಅವರ ಮೇಲೆ ಜನರಿಗೆ ಬಲವಾದ ನಂಬಿಕೆ ಇದೆ. ಸಿದ್ದರಾಮಯ್ಯ ಇಲ್ಲದಿದ್ದರೆ ಕರ್ನಾಟಕ ದಲ್ಲಿಅಹಿಂದ ಸಮಾಜ ಮುಳುಗುತ್ತದೆ. ಬಲಹೀನವಾಗುತ್ತದೆ. ಹಾಗಾಗಿ ಅಹಿಂದ ಸಮಾಜಗಳು ಎಚ್ಚರಿಕೆಯಿಂದ ಇರಬೇಕು" ಎಂದು ಹೇಳಿದರು.


ನಾವೆಲ್ಲರೂ ಸಿದ್ದರಾಮಯ್ಯ ನಾಯಕತ್ವ ಗಟ್ಟಿಗೊಳಿಸಲು ಮುಂದಾಗಬೇಕು. ಎಂದು ಹೇಳಿದರು. ನೂತನ ವಿಧಾನ ಪರಿಷತ್ ಸದಸ್ಯರಾದ ಡಾ.ಕೆ. ಶಿವಕುಮಾರ್ ಅವರ ಅಭಿನಂದನಾ ಕಾರ್ಯಕ್ರಮವು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಹೊಗಳಿಕೆಗೆ ವೇದಿಕೆಯಾಯಿತು. ಮಾಜಿ ಮುಖ್ಯಮಂತ್ರಿ ದೇವರಾಜ ಅರಸು ಅವರ ಸಿಎಂ ಅವಧಿ ದಾಖಲೆ ಮುರಿದ ಬೆನ್ನಲ್ಲೇ, ಸಿದ್ದರಾಮಯ್ಯ ಪರವಾಗಿ ಕೈ ನಾಯಕರು ತಮ್ಮ ಧ್ವನಿಯನ್ನು ಮತ್ತಷ್ಟು ಗಟ್ಟಿಗೊಳಿಸಿದ್ದಾರೆ.

ಮೈಸೂರು ಸೇರಿದಂತೆ ರಾಜ್ಯದ ನಾನಾ ಕಡೆ ವಿಜಯೋತ್ಸವ ಆಚರಣೆ ನಡೆಯುತ್ತಿರುವ ಬೆನ್ನಲ್ಲೇ, ವೇದಿಕೆಯಲ್ಲಿದ್ದ ಜಿಲ್ಲಾಉಸ್ತುವಾರಿ ಸಚಿವ ಡಾ.ಎಚ್.ಸಿ.ಮಹದೇವಪ್ಪ ಸೇರಿದಂತೆ ಶಾಸಕರು, ದಲಿತ ಮುಖಂಡರು ಸಿದ್ದರಾಮಯ್ಯ ಅವರ ಗುಣಗಾನ ಮಾಡಿದ್ದಾರೆ. ಅಹಿಂದ ಸಮುದಾಯಕ್ಕೆ ಮುಖ್ಯಮಂತ್ರಿ ಸಿದ್ದರಾಮಯ್ಯ ನೀಡಿದ ಕೊಡುಗೆಯನ್ನು ಸ್ಮರಿಸುವ ಮೂಲಕ, ತಮ್ಮ ರಾಜಕೀಯ ಜೀವನಕ್ಕೂ ಅವರು ಹೇಗೆ ನೆರವಾದರು ಎಂಬ ಸಂಗತಿಯನ್ನು ಮಹದೇವಪ್ಪ ವೇದಿಕೆಯಲ್ಲಿ ಹಂಚಿಕೊಂಡರು. ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಇಂದು ಕರ್ನಾಟಕದ ಸುದೀರ್ಘ ಅವಧಿಯ ಮುಖ್ಯಮಂತ್ರಿ ಎಂಬ ಹೆಗ್ಗಳಿಕೆಗೆ ಪಾತ್ರರಾಗುವ ಮೂಲಕ ಹೊಸ ಇತಿಹಾಸ ಬರೆದಿದ್ದಾರೆ.

## ತಾಲೂಕ ದೈಹಿಕ ಶಿಕ್ಷಕ ದಖನಿಗೆ ಸನ್ಮಾನ

❑ **ನೈಜ್ಯ ದೇಸೆ ನ್ಯೂಸ್**

**ತಾಳಿಕೋಟಿ: ಮುದ್ದೇಬಿಹಾಳ ತಾಲೂಕಿನ ನೂತನ ದೈಹಿಕ ಶಿಕ್ಷಣಾಧಿಕಾರಿಯಾಗಿ ನಿಯೋಜನೆಗೊಂಡ ಎ.ವೈ.ದಖನಿ ಅವರನ್ನು ಬಳಗಾನೂರ ಸರಕಾರಿ ಮಾದರಿಯ ಪ್ರಾಥಮಿಕ ಶಾಲೆ ಸಿಬ್ಬಂದಿಗಳ ವತಿಯಿಂದ ಸನ್ಮಾನಿಸಿ ಗೌರವಿಸಲಾಯಿತು. ಮಂಗಳವಾರ ತಾಲೂಕಿನ ಬಳಗಾನೂರ ಗ್ರಾಮದಲ್ಲಿ ಜರುಗಿದ ಕಲಿಕಾ ಹಬ್ಬ ಕಾರ್ಯಕ್ರಮದ ವೇದಿಕೆಯಲ್ಲಿ ಅವರಿಗೆ ಈ ಸನ್ಮಾನ ನೀಡಲಾಯಿತು.**



ಮುಖ್ಯ ಗುರುಗಳಾದ ಆರ್.ಎಂ. ಮುರಾಳ ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದರು. ಈ ಸಮಯದಲ್ಲಿ ಪ್ರಭಾರಿ ಕ್ಷೇತ್ರ ಶಿಕ್ಷಣಾಧಿಕಾರಿ ಆರ್.ಬಿ.ದಮ್ಮೂರಮಠ, ಇಸಿಓ ಸುರೇಶ ಹಿರೇಮಠ,ಇಸಿಓ ಡಿ.ವೈ. ಗುರಿಕಾರ, ರಾಜ್ಯ ಉತ್ತಮ ಶಿಕ್ಷಕಿ ಪ್ರಶಸ್ತಿ ಪುರಸ್ಕೃತ ಮಡಿವಾಳಮ್ಮ ನಾಡಗೌಡ,ಸಿಆರ್ಪಿ ಬಾಲಾಜಿಸಿಂಗ್ ಬಿಜಾಪುರ, ಶಿಕ್ಷಕರ ಸಂಘದ ಅಧ್ಯಕ್ಷ ಬಿ.ಟಿ.ವಜ್ಜಲ್, ನೌಕರರ ಪತ್ತಿನ ಸಂಘದ ಅಧ್ಯಕ್ಷ ಸುರೇಶ್ ವಾಲಿಕಾರ, ಕಾರ್ಯದರ್ಶಿ ಎಸ್.ಬಿ.ಬೀರಗೊಂಡ,ಬಿ.ಆರ್.ಪಿ ಕಾಶಿನಾಥ ಸಜ್ಜನ, ಸಿ ಆರ್ ಸಿ ಎಸ್. ಎಮ್ .ಪಾಲ್ಕಿ, ಶಿಕ್ಷಕ ಬಿ.ಐ.ಸಜ್ಜನ, ಎಸ್. ಎಂ.ಬೈಚಬಾಳ, ಗಣ್ಯರಾದ ಮಲ್ಲಣ್ಣ ದೋರನಹಳ್ಳಿ, ಚೆನ್ನಣ್ಣ ಅಲದಿ, ಲೋಕಣ್ಣ ಸಜ್ಜನ, ನಿವೃತ್ತ ಶಿಕ್ಷಕ ಶಿವಣ್ಣ ಕಡಕೋಳ, ಸಂಗನಗೌಡ ಬಿರಾದಾರ,ಬಸನಗೌಡ ದೋರನಹಳ್ಳಿ, ಮುತ್ತು ಮನಹಳ್ಳಿ, ಭೀಮನಗೌಡ ಬಿರಾದಾರ, ಪ್ರಭು ಪತ್ತೆಪೂರ, ಎಸ್.ಎಂ.ಪಾಲ್ಕಿ ಇದ್ದರು.

# ವಿಧಾನಸೌಧದಲ್ಲಿ ಆಹಾರ ಮತ್ತು ನಾಗರಿಕ ಸರಬರಾಜು ಇಲಾಖೆಯ ರಾಜ್ಯಮಟ್ಟದ ಸಮಿತಿ 2 ನೇ ಸಭೆ ಬಡವರ ಪಡಿತರ ಹಕ್ಕು ಸಂರಕ್ಷಣೆ ಅತ್ಯಂತ ಪ್ರಾಮುಖ್ಯ



❑ **ನೈಜ್ಯ ದೇಸೆ ನ್ಯೂಸ್**

**ಬೆಂಗಳೂರು: ಜನವರಿ 7 ವಿಧಾನಸೌಧದಲ್ಲಿ ಇಂದು ನಡೆದ ಆಹಾರ ಮತ್ತು ನಾಗರಿಕ ಸರಬರಾಜು ಹಾಗೂ ಗ್ರಾಹಕರ ವ್ಯವಹಾರಗಳ ಇಲಾಖೆಯ ಕರ್ನಾಟಕ ರಾಜ್ಯಮಟ್ಟದ ಸಮಿತಿಯ ಎರಡನೇ ಸಭೆ ಸಚಿವರಾದ ಶ್ರೀ ಕೆ.ಎಚ್. ಮುನಿಯಪ್ಪ ಅವರ ಅಧ್ಯಕ್ಷತೆಯಲ್ಲಿ ನಡೆಯಿತು. ರಾಜ್ಯದ ಪಡಿತರ ವ್ಯವಸ್ಥೆಯ ಬಲವರ್ಧನೆ, ವಿತರಣಾ ಜಾಲದ ಪಾರದರ್ಶಕತೆ ಹಾಗೂ ಬಡಜನರ ಆಹಾರ ಭದ್ರತೆ ಕುರಿತಂತೆ ಸಭೆಯಲ್ಲಿ ವ್ಯಾಪಕ ಚರ್ಚೆ ನಡೆಯಿತು.**

ಸಭೆಯಲ್ಲಿ ವಿಧಾನಪರಿಷತ್ ಸದಸ್ಯರಾದ ಶ್ರೀ ಬಸನಗೌಡ ಬಾದರ್ಲಿ ಅವರು ಭಾಗವಹಿಸಿ, ಮತ್ತು ನಗರ ಪ್ರದೇಶಗಳ ಪಡಿತರದಾರರು ಎದುರಿಸುತ್ತಿರುವ practically ಸಮಸ್ಯೆಗಳನ್ನು ಗಮನಿಸಿದಂತೆ ಸಮಿತಿಯ ಮುಂದೆ ಮಹತ್ವದ ಸಲಹೆಗಳನ್ನು ಮಂಡಿಸಿದರು. ಬಾದರ್ಲಿ ಅವರು ಸಭೆಯಲ್ಲಿ ಮಾತನಾಡಿ, "ರಾಜ್ಯದ ಪ್ರತಿಯೊಬ್ಬ ಪಡಿತರದಾರನಿಗೂ ಯಾವುದೇ ವಿಳಂಬ, ತೊಂದರೆ ಅಥವಾ ವಂಚನೆ ಉಂಟಾಗಬಾರದು. ಪಡಿತರ ವಸ್ತುಗಳು ಮನೆ ಮನೆಗೆ ತಲುಪುವಂತೆ ವಿತರಣಾ ವ್ಯವಸ್ಥೆಯಲ್ಲಿ ಹೆಚ್ಚಿನ ಬದಲಾವಣೆ, ಮೇಲ್ವಿಚಾರಣೆ ಮತ್ತು ತಂತ್ರಜ್ಞಾನ ಬಳಕೆ ಅಗತ್ಯ. ಬಡವರು ಸರ್ಕಾರದ ಮೇಲಿನ ವಿಶ್ವಾಸದಿಂದ ಬದುಕುತ್ತಿದ್ದಾರೆ; ಅವರಿಗೆ ತೊಂದರೆ ಆಗದಂತೆ ಅಧಿಕಾರಿಗಳು ಅತ್ಯಂತ ಜವಾಬ್ದಾರಿಯುತವಾಗಿ ನಡೆದುಕೊಳ್ಳಬೇಕು," ಎಂದು ಸೂಚಿಸಿದರು. ಅವರು ಪಡಿತರ ಅಂಗಡಿಗಳಲ್ಲಿ: ಸಾಮಗ್ರಿಗಳ ಪೂರ್ಣ ಲಭ್ಯತೆ ಡಿಜಿಟಲ್ ರೇಷನ್ ಕಾರ್ಡ್ ಬಳಕೆಯಲ್ಲಿ ತಾಂತ್ರಿಕ ತೊಂದರೆ ಪರಿಹಾರ ಪಡಿತರದಾರರ ಹೆಸರಲ್ಲಿ ನಡೆಯುವ ದುರುಪಯೋಗಗಳ ನಿಗ್ರಹ ಹಿರಿಯ ನಾಗರಿಕರು ಮತ್ತು ಅಂಗವಿಕಲರಿಗೆ ವಿಶೇಷ ಸೌಲಭ್ಯ ಇತ್ಯಾದಿ ವಿಚಾರಗಳನ್ನೂ ಸಭೆಯ ಗಮನಕ್ಕೆ ತಂದರು. ಸಚಿವ ಮುನಿಯಪ್ಪ ಅವರು, ಬಾದರ್ಲಿ ಪ್ರಸ್ತಾಪಿಸಿದ ಸಲಹೆಗಳನ್ನು ಗಮನಿಸಿ, ಇಲಾಖೆಯ ಅಧಿಕಾರಿಗಳಿಗೆ ತಕ್ಷಣ ಕ್ರಮ ಕೈಗೊಳ್ಳುವಂತೆ ಸೂಚನೆ ನೀಡಿದರು. ಪಡಿತರ ವ್ಯವಸ್ಥೆಯಲ್ಲಿ ಯಾವುದೇ ರೀತಿಯ ಗೊಂದಲ ಅಥವಾ ಅಕ್ರಮಕ್ಕೆ ಅವಕಾಶ ನೀಡುವುದಿಲ್ಲ ಎಂದೂ ಅವರು ಸ್ಪಷ್ಟಪಡಿಸಿದರು. ಸಭೆಯಲ್ಲಿ ಹಿರಿಯ ಅಧಿಕಾರಿಗಳು, ಇಲಾಖೆಯ ಪದಾಧಿಕಾರಿಗಳು ಸೇರಿದಂತೆ ಹಲವು ಸದಸ್ಯರು ಉಪಸ್ಥಿತರಿದ್ದರು.

## ಚಬನೂರ ಕಾರ್ಯಕ್ರಮಕ್ಕೆ ಪೊಲೀಸ್ ವರಿಷ್ಠಾಧಿಕಾರಿಗಳಿಗೆ ಆಹ್ವಾನ

❑ **ನೈಜ್ಯ ದೇಸೆ ನ್ಯೂಸ್**

**ತಾಳಿಕೋಟಿ: ತಾಲೂಕಿನ ಚಬನೂರ ಗ್ರಾಮದಲ್ಲಿ ನೂತನವಾಗಿ ನಿರ್ಮಾಣಗೊಂಡಿರುವ ಶ್ರೀ ರಾಮಲಿಂಗೇಶ್ವರ ಮಠ ಹಾಗೂ ಸಭಾಭವನದ ಉದ್ಘಾಟನಾ ಕಾರ್ಯಕ್ರಮಕ್ಕೆ ವಿಜಯಪುರ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಲಕ್ಷ್ಮಣ ನಿಂಬರಗಿ ಇವರಿಗೆ ಆಮಂತ್ರಣ ನೀಡಲಾಯಿತು.**

ಬುಧವಾರ ಪರಮಪೂಜ್ಯರ ನೇತೃತ್ವದಲ್ಲಿ ವಿಜಯಪುರದ ಎಸ್ ಪಿ ಅವರ ಕಚೇರಿಗೆ ತೆರಳಿದ ನಿಯೋಗವು ನೂತನ ಮಠ ಹಾಗೂ ಸಭಾಭವನದ ಉದ್ಘಾಟನೆ ಅಂಗವಾಗಿ ಫೆಬ್ರವರಿ 4 ರಂದು ನಡೆಯಲಿರುವ ಯೋಧರಿಗೆ



ಹಾಗೂ ಚಬನೂರ ಗ್ರಾಮದ ನೌಕರರ ಸನ್ಮಾನ ಕಾರ್ಯಕ್ರಮದಲ್ಲಿ ಭಾಗವಹಿಸಲು ಅವರನ್ನು ವಿನಂತಿಸಿಕೊಂಡರು. ಪರಮಪೂಜ್ಯರ ನಿಯೋಗದ ಆಮಂತ್ರಣವನ್ನು ಗೌರವ ಪೂರ್ಣವಾಗಿ ಒಪ್ಪಿಕೊಂಡ ಪೋಲಿಸ್ ವರಿಷ್ಠಾಧಿಕಾರಿ ನಿಂಬರಗಿ ಅವರು ಕಾರ್ಯಕ್ರಮದಲ್ಲಿ ಭಾಗವಹಿಸಲು ತಮ್ಮ ಒಪ್ಪಿಗೆ ಸೂಚಿಸಿದರು. ಇದೇ ಸಂದರ್ಭದಲ್ಲಿ ಪೂಜ್ಯರ ನಿಯೋಗವು ಪೊಲೀಸ್ ವರಿಷ್ಠಾಧಿಕಾರಿಗಳಿಗೆ ಸನ್ಮಾನಿಸಿ ಆಶೀರ್ವಾದ ನೀಡಿದರು. ಈ ಸಮಯದಲ್ಲಿ ಕೊಡೆಕಲ್ಲದ ಪೂಜ್ಯ ಶಿವಕುಮಾರ ಮಹಾಸ್ವಾಮಿಗಳು, ನಾವದಗಿಯ ಷ.ಬ್ರ.ರಾಜಗುರು ರಾಜೇಂದ್ರ ಒಡೆಯರ್ ಶಿವಾಚಾರ್ಯರು, ಕೋಲಾರದ ಪ್ರಭುಕುಮಾರ ಶ್ರೀಗಳು, ದೇವರ ಹಿಪ್ಪರಗಿಯ ಜಡಿಸಿದ್ದೇಶ್ವರ ಶ್ರೀಗಳು, ಚಬನೂರಿನ ರಾಮಲಿಂಗಯ್ಯ ಶ್ರೀಗಳು, ಪರದೇಶಿ ಮಠದ ಶಿವಯೋಗಿ ಶಿವಾಚಾರ್ಯರು, ಕಲಕೇರಿಯ ಸಿದ್ದರಾಮ ಶಿವಾಚಾರ್ಯರು, ಗದ್ದಗಿ ಮಠದ ಶ್ರೀಗಳು, ಅಥಣಿ ಗಚ್ಚಿನ ಮಠದ ಶ್ರೀಗಳು, ಕೊಗಟನೂರಿನ ಶ್ರೀಗಳು,ವಡವಡಗಿ ಶ್ರೀಗಳು,ಚಡಚಣ ಶ್ರೀಗಳು,ಗುಳಬಾಳ ಶ್ರೀಗಳು, ಮಸಿಬನಾಳ ಶ್ರೀಗಳು, ಕೋರವಾರ ಶ್ರೀಗಳು ಮತ್ತಿತರರು ಇದ್ದರು.

## ಪಟ್ಟಣದ ಭೂದಾಖಲೆಗಳ ಸಹಾಯಕ ನಿರ್ದೇಶಕರ ಕಚೇರಿಯ ಮೇಲೆ ಲೋಕದಾಳಿ

❑ **ನೈಜ್ಯ ದೇಸೆ ನ್ಯೂಸ್**

**ಮಾನ್ವಿ: ಪಟ್ಟಣದ ಭೂದಾಖಲೆಗಳ ಸಹಾಯಕ ನಿರ್ದೇಶಕರ ಕಚೇರಿಯ ಮೇಲೆ ಕರ್ನಾಟಕ ಲೋಕಯುಕ್ತ ತಂಡದಿಂದ ದಾಳಿ ನಡೆಸಿ ದಾಖಲೆಗಳನ್ನು ಕರ್ನಾಟಕ ಲೋಕಯುಕ್ತ ಡಿವೈಎಸ್.ಪಿ. ಹೋಸಪೇಟೆ ಸಚೀನ್ ಛಲವಾದಿ ಪರಿಶೀಲಿಸಿದರು.**

ಭೂದಾಖಲೆಗಳ ಸಹಾಯಕ ನಿರ್ದೇಶಕ ಮಹಮ್ಮದ್ ನೂರುದಿನ್ನ್ ರವರಿಂದ ಅಗತ್ಯ ದಾಖಲೆಗಳನ್ನು ಪಡೆದು ಪರಿಶೀಲಿಸಿ ರೈತರಿಂದ ಜಮೀನು ಆಳತೆ ಸೇರಿದಂತೆ ವಿವಿಧ ಖಾತೆಗಳಿಗೆ ಸಂಬಂಧಿಸಿದಂತೆ ಬಂದಿರುವ ಅರ್ಜಿಗಳು



ಬಾಕಿ ಇರುವ ಅರ್ಜಿಗಳು, ತಾಂತ್ರಿಕ ತೊಂದರೆಗಳು,ಭೂಮಾಪಕರ ಹಾಗೂ ಸಿಬ್ಬಂದಿಗಳ ಕೊರತೆ,ಸಮಸ್ಯೆಗಳ ಬಗ್ಗೆ ಮಾಹಿತಿ ಪಡೆದು ಲೋಪಗಳು ಕಂಡು ಬಂದಲ್ಲಿ ನೋಟಿಸ್ ನೀಡಲಾಗುವುದು ಹಾಗೂ ಉನ್ನತ ಅಧಿಕಾರಿಗಳಿಗೆ ವರದಿ ನೀಡಲಾಗುವುದು ಎಂದು ತಿಳಿಸಿದರು.

# ಶಿವಯೋಗಿ ಸಿದ್ಧರಾಮ ಜಯಂತಿ ಆಚರಣೆಗೆ ಸಿದ್ಧತೆಯಾಗಲಿ

❑ **ನೈಜ್ಯ ದೇಸೆ ನ್ಯೂಸ್**

**ರಾಯಚೂರು: ಜನವರಿ 07 (ಕರ್ನಾಟಕ ವಾರ್ತೆ): ಇಲ್ಲಿನ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್ ಹಾಗೂ ಕನ್ನಡ ಮತ್ತು ಸಂಸ್ಕೃತಿ ಇಲಾಖೆಯಿಂದ ಶಿವಯೋಗಿ ಸಿದ್ಧರಾಮ ಜಯಂತಿಯನ್ನು ಜನವರಿ 14ರಂದು ವಿಜೃಂಭಣೆಯಿಂದ ಆಚರಿಸಲು ಅಗತ್ಯ ಸಿದ್ಧತಾ ಕ್ರಮಗಳನ್ನು ಕೈಗೊಳ್ಳಬೇಕೆಂದು ಜಿಲ್ಲಾಧಿಕಾರಿಗಳ ಕಚೇರಿಯ ತಹಶೀಲ್ದಾರ್ ಜಗದೀಶ್ ಅವರು ಸಂಬಂಧಿಸಿದ ಅಧಿಕಾರಿಗಳಿಗೆ ಸೂಚನೆ ನೀಡಿದರು.**

ಜನವರಿ 07ರ ಬುಧವಾರ ದಂದು ನಗರದ ನೂತನ ಜಿಲ್ಲಾಧಿಕಾರಿಗಳ ಕಚೇರಿಯ ಸಭಾಂಗಣದಲ್ಲಿ ಹಮ್ಮಿಕೊಂಡಿದ್ದ ಶಿವಯೋಗಿ ಸಿದ್ಧರಾಮ ಜಯಂತಿ ಪೂರ್ವಭಾವಿ ಸಭೆಯ



ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು. ಜನವರಿ 14ರಂದು ನಗರದ ಪಂಡಿತ ಸಿದ್ಧರಾಮ ಜಂಬಲದಿನ್ನಿ ಜಿಲ್ಲಾ ರಂಗಮಂದಿರದಲ್ಲಿ ನಡೆಯುವ ಶಿವಯೋಗಿ ಸಿದ್ಧರಾಮ ಜಯಂತಿಯ ವೇದಿಕೆಯ ಕಾರ್ಯಕ್ರಮಕ್ಕೆ ಸಮಾಜದ ಮುಖಂಡರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಬೇಕು ಎಂದು ಅವರು ಮನವಿ ಮಾಡಿದರು. ಅಂದು ಎಲ್ಲಾ ಇಲಾಖೆಗಳ ರಾಯಚೂರು ಜಿಲ್ಲಾ ಹಾಗೂ ರಾಯಚೂರು ತಾಲೂಕು ಮಟ್ಟದ ಅಧಿಕಾರಿಗಳು ಮತ್ತು ಸಿಬ್ಬಂದಿ ಕಡ್ಡಾಯ ಹಾಜರಿರಬೇಕು ಎಂದು ತಿಳಿಸಿದರು.

ಅಂದು ಬೆಳಗ್ಗೆ 9 ಗಂಟೆಗೆ ನಗರದ ಆಶಾಪೂರು ವೃತ್ತದಿಂದ ನಡೆಯುವ ಮೆರವಣಿಗೆಯ ಮಾರ್ಗದಲ್ಲಿ ಶುಚಿತ್ವ ಕಾಯ್ದುಕೊಳ್ಳಬೇಕು. ನಗರದ ಪ್ರಮುಖ ವೃತ್ತಗಳಲ್ಲಿ ದೀಪಾಲಂಕಾರ ಮಾಡಬೇಕು. ಎಲ್ಲ ಸರಕಾರಿ ಕಚೇರಿಗಳಲ್ಲಿ, ಶಾಲಾ-ಕಾಲೇಜುಗಳಲ್ಲಿ ಕಡ್ಡಾಯವಾಗಿ ಜಯಂತಿ ಆಚರಿಸಬೇಕು ಎಂದು ಸೂಚನೆ ನೀಡಿದರು. ವೇದಿಕೆಯ ಕಾರ್ಯಕ್ರಮದಲ್ಲಿ ವಿಶೇಷ ಉಪನ್ಯಾಸಕ್ಕೆ ಏರ್ಪಾಡು ಮಾಡಬೇಕು. ಕಾರ್ಯಕ್ರಮ ನಡೆಯುವ ಸ್ಥಳದಲ್ಲಿ ಕುಡಿಯುವ ನೀರಿನ ವ್ಯವಸ್ಥೆ ಮಾಡುವುದರ ಜತೆಗೆ ಸ್ವಚ್ಛತೆ ಮತ್ತು ನೈರ್ಮಲ್ಯ ಕಾಪಾಡಬೇಕು. ಅಲ್ಲದೆ ಶಿಷ್ಠಾಚಾರಂತೆ ಆಹ್ವಾನ ಪತ್ರಿಕೆ ಮುದ್ರಿಸಿ ಗಣ್ಯರಿಗೆ ವಿತರಿಸಬೇಕು. ಅಂದು ರಂಗಮಂದಿರದ ಆವರಣದಲ್ಲಿ ಕುಡಿಯುವ ನೀರು ಸೇರಿದಂತೆ ಎಲ್ಲಾ ಅಗತ್ಯ ಏರ್ಪಾಡು ಮಾಡಬೇಕು ಎಂದರು. ಸಭೆಯಲ್ಲಿ ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕರಾದ ಉತ್ತರಾದೇವಿ, ಸಮಾಜದ ಮುಖಂಡರಾದ ಶಿವರಾಜ, ಹೊನ್ನಪ್ಪ, ಆಂಜೀನಯ್ಯ, ಶಶಿಕಲಾ ಭೀಮರಾಯ, ಯಲ್ಲಪ್ಪ, ದೇವೇಂದ್ರ ಬಿಚ್ಚಾಲಿ, ಲಕ್ಷ್ಣ ಗಾಣಧಾಳ, ಶಿವರಾಜ, ಕೆ.ತಿಮ್ಮಪ್ಪ, ಜಂಬಣ್ಣ, ಈರೇಶ ಸೇರಿದಂತೆ ವಿವಿಧ ಇಲಾಖೆಗಳ ಅಧಿಕಾರಿಗಳು ಹಾಗೂ ಸಿಬ್ಬಂದಿ ಉಪಸ್ಥಿತರಿದ್ದರು.

## ಸಾಹಿತ್ಯ ಸಿಂಚನ

ಭಾವ ಬರಿದಾಗಿದೆ

ಸೂರ್ಯನಿರದ ಬಾನಿನಂತೆ ಕವಿಯತೆದೆಗೆ ಕತ್ತಲು ಧೈರ್ಯ
ಭೂಮಿ ನಡುಗಿದಂತೆ ಕುಸಿದು ಹೋಯ್ತು ನಮ್ಮೆದೆ

ಹೂವಿನಂತೆ ನಿಮ್ಮ ಮಾತು ಎಲ್ಲರೆದೆಯು ಅರಳಿದೆ
ಎವೆಯ ಹಾಗೆ ಬಾಳಿಗೆಲ್ಲ ರಕ್ಷೆ ತಾನು ಆಗಿದೆ

ಜಾತಿ ಧರ್ಮವೆಲ್ಲ ಮೀರಿ ಜಗದ ಕಣ್ಣು ತೆರೆಸಿದೆ ನೀತಿ
ನಡತೆ ಮೌಲ್ಯ ತಿಳಿಸಿ ಜ್ಯೋತಿಯಾಗಿ ನಡೆದಿರಿ

ಶುದ್ಧ ಹಾಲ ಬಿಳುಪಿನಂತೆ ಶ್ವೇತ ವರ್ಣವ ಧರಿಸುತ
ಸಂತನಾಗಿ ಬಾಳಿ ಜಗದಿ ಮಲಿನ ಕಳೆದು ಹೊರಟಿರಿ

ಇಳೆಯ ಚಿಲುಮೆ ಉಕ್ಕುವಂತೆ ಭಕ್ತಿ ಚಿಲುಮೆ ಉಕ್ಕಿಸಿ
ಕೊಳೆಯು ತೊಳೆವ ಮಳೆಯ ಹಾಗೆ ಮನದ ಕೊಳೆಯ
ತೊಳೆದಿರಿ

ಭಾವ ಬರಿದುಗೊಳಿಸಿ ನೀವು ಬಾರದೂರಿಗೆ ನಡೆದಿರಿ
ಜಗವ ನಿಮ್ಮ ನಿತ್ಯ ಸ್ಮರಿಸಿ ಶೋಕದೊಳಗೆ ಮುಳುಗಿದೆ
ಪರಮ ಪೂಜ್ಯ ಸಿದ್ದೇಶ್ವರ ಸ್ವಾಮಿಜಿಯವರ

**ತುಳಸಿದಾಸ ಬಿ ಎಸ್**

# ರಾಜ್ಯದ ಇತಿಹಾಸದಲ್ಲೇ ದೀರ್ಘ ಕಾಲದ ಅವಧಿ ಸಿಎಂ ಸಿದ್ದರಾಮಯ್ಯ ಅಭಿಮಾನಿಗಳಿಂದ ಸಡಗರ ಸಂಭ್ರಮ

ನೈಜ್ಯ ದೆಸೆ ನ್ಯೂಸ್

**ಮುಖ್ಯಮಂತ್ರಿ ಸಿದ್ದರಾಮಯ್ಯ ನೇರ ದಿಟ್ಟ ನುಡಿಗಳ ಮಾತುಗಾರ, ಛಲಗಾರ, ಪರಿಶ್ರಮದ ರಾಜಕಾರಣಿ ಈ ಮುಂಚೆ ದೇವರಾಜ ಅರಸು ಅವರ ಅವಧಿಯನ್ನು ಸರಿಗಟ್ಟಿದ ಹಿನ್ನೆಲೆಯಲ್ಲಿ ಸಿಂಧನೂರು ನಗರದ ಎಪಿಎಂಸಿ ಆವರಣದಲ್ಲಿ ಬುಧವಾರ ಕಾಂಗ್ರೆಸ್ ಪಕ್ಷದ ಮುಖಂಡರು, ಕಾರ್ಯಕರ್ತರು, ಅಭಿಮಾನಿಗಳು, ಕೇಕ್ ಕಟ್ ಮಾಡಿ ಪರಸ್ಪರ ಕೇಕ್ ತಿನಿಸಿ, ತಮ್ಮ ನೆಚ್ಚಿನ ನಾಯಕನಿಗೆ ಜೈಕಾರ ಕೂಗಿ ಸಂಭ್ರಮಿಸಿದರು.**

ನಂತರ ಕಾಂಗ್ರೆಸ್ ಮುಖಂಡ ಹನುಮೇಶ ಬಾಗೋಡಿ ಮಾತನಾಡಿ, ಕರ್ನಾಟಕ ರಾಜ್ಯದ ಇತಿಹಾಸದಲ್ಲೇ ಮುಖ್ಯಮಂತ್ರಿ ಸಿದ್ದರಾಮಯ್ಯ ದೀರ್ಘಕಾಲದ ಅವಧಿಯವರೆಗೆ 7 ವರ್ಷ 7 ತಿಂಗಳು 21 ದಿನಗಳ ಪೂರೈಸಿದ



ರಾಜ್ಯದ ಏಕೈಕ ಮುಖ್ಯಮಂತ್ರಿಗಳು ಸಿದ್ದರಾಮಯ್ಯನವರು, ಈ ಹಿಂದೆ ಅತಿ ಹೆಚ್ಚು ದೀರ್ಘಾವಧಿಕಾಲ ಮುಖ್ಯಮಂತ್ರಿಯಾಗಿ ಆಡಳಿತ ನಡೆಸಿದ್ದ ಡಿ.ದೇವರಾಜ ಅರಸು ಅವರ ಹೆಸರಿನಲ್ಲಿದ್ದ ದಾಖಲೆಯನ್ನು ಸರಿಗಟ್ಟಿ ಈಗ ಅತಿ ಹೆಚ್ಚಿನ ಅವಧಿಯ ಮುಖ್ಯಮಂತ್ರಿ ಸಿದ್ದರಾಮಯ್ಯನವರು ಆಗಿದ್ದಾರೆ. ಇನ್ನೂ ರಾಜ್ಯದ ಮುಖ್ಯಮಂತ್ರಿ ಮುಂದುವರೆಯಲಿ ಕಾಂಗ್ರೆಸ್ ಸರ್ಕಾರದಲ್ಲಿ 5 ವರ್ಷ ಪೂರ್ಣಗೊಳಿಸಲಿ ದೇವರು ಅವರಿಗೆ ಆರೋಗ್ಯ, ಆಯಸ್ಸು ಕೊಟ್ಟು ಕಾಪಾಡಲಿ ಮತ್ತು ಉತ್ತಮ ಆಡಳಿತ ರಾಜ್ಯಕ್ಕೆ ನೀಡಲಿ ಎಂದು ಶುಭಹರಸಿ ಹಾರೈಸಿದರು. 6ಕೇಕ್ ಕತ್ತರಿಸುವ ಸಂಭ್ರಮದಲ್ಲಿ ನಗರದ ಎಪಿಎಂಸಿ ವರ್ತಕರು, ಕಾಂಗ್ರೆಸ್ ಮುಖಂಡರು, ಅಭಿಮಾನಿಗಳು ಅಹಿಂದ ತಾಲೂಕು ಅಧ್ಯಕ್ಷ ಪರಶುರಾಮ, ವರ್ತಕರ ಸಂಘದ ಅಧ್ಯಕ್ಷ ದೊಡ್ಡನಗೌಡ, ಕಾರ್ಯದರ್ಶಿ ಫಕೀರಪ್ಪ ತಿಡಿಗೋಳ, ಮಲ್ಲಪ್ಪ ಮೈಲಾರ್, ಬಸವರಾಜ ಗೋರೇಬಾಳ, ಶಿವರಾಜ ಹಸಮಕಲ್, ಖಾಜಾಸಾಬ್, ರಫೀ, ವಿಜಯಸೇಠ್, ಲಲಿತ್, ಆನಂದಸೇಠ್, ಸಾಬಣ್ಣ ಅಂಗಡಿ ವಿರುಪಾಪುರ, ಸೇರಿದಂತೆ ನೂರಾರು ಸಂಖ್ಯೆಯಲ್ಲಿ ಸಿದ್ದರಾಮಯ್ಯ ಅಭಿಮಾನಿಗಳು ಇದ್ದರು.

## ಅಂಜುಮನ್–ಎ–ಮುಸ್ಲಿಮೀನ್ ಲಿಂಗಸೂಗೂರ ವತಿಯಿಂದ ಅಯ್ಯಪ್ಪ ಮಾಲಾದಾರಿಗಳಿಗೆ ಅನ್ನ ಸೇವೆ



ನೈಜ್ಯ ದೆಸೆ ನ್ಯೂಸ್

**ಲಿಂಗಸಗೂರು: ಸಮಾಜದಲ್ಲಿ ಪರಸ್ಪರ ಸ್ನೇಹ, ಸಾಮರಸ್ಯ ಹಾಗೂ ಧಾರ್ಮಿಕ ಸಹಿಷ್ಣುತೆಯನ್ನು ಉತ್ತೇಜಿಸುವ ಉದ್ದೇಶದಿಂದ ಅಂಜುಮನ್–ಎ–ಮುಸ್ಲಿಮೀನ್ ಲಿಂಗಸೂಗೂರ ತಾಲೂಕು ಕಮಿಟಿ ವತಿಯಿಂದ ಅಯ್ಯಪ್ಪ ಸ್ವಾಮಿ ಮಾಲಾದಾರಿಗಳಿಗೆ ಅನ್ನ ಸಂತರ್ಪಣೆ ಕಾರ್ಯಕ್ರಮವನ್ನು ಸಂಭ್ರಮವಾಗಿ ಆಯೋಜಿಸಲಾಯಿತು.**

ಗುರುಸ್ವಾಮಿಗಳಾದ ಸಿದ್ದರಾಮ ಸ್ವಾಮಿ ಅವರ ನೇತೃತ್ವದಲ್ಲಿ ಮಾಲಾಧಾರಿಗಳು ಧಾರ್ಮಿಕ ಶ್ರದ್ಧೆಯಿಂದ ಮಕರವಿಲಕ್ಕಿನ ಯಾತ್ರೆಗೆ ಸಜ್ಜಾಗುತ್ತಿದ್ದ ಸಂದರ್ಭದಲ್ಲಿ, ಅಂಜುಮನ್ ವತಿಯಿಂದ ಆತ್ಮೀಯ ಆತಿಥ್ಯ ನೀಡಲಾಯಿತು. ಮಾಲಾದಾರಿಗಳಿಗೆ ಅನ್ನ, ನೀರು ಮತ್ತು ತಾಜಾ ಊಟವನ್ನು ವ್ಯವಸ್ಥಿತವಾಗಿ ಒದಗಿಸಿ, "ಧರ್ಮ ಬೇರೆ ? ಮಾನವೀಯತೆ ಒಂದೇ" ಎಂಬ ಸಂದೇಶವನ್ನು ಜಾಗೃತಗೊಳಿಸಲಾಯಿತು. ಸಮಾಜದಲ್ಲಿ ಭಾವೈಕ್ಯತೆಯ ಮಾದರಿ ವೈವಿಧ್ಯಮಯ ಧರ್ಮ ಗಳಿದ್ದರೂ, ಪರಸ್ಪರ ಗೌರವ ಮತ್ತು ಸ್ನೇಹಪೂರ್ಣ ಸಹಭಾಗಿತ್ವ ಇರಬೇಕು ಎಂಬ ಆಶಯದಿಂದ ಈ ಕಾರ್ಯಕ್ರಮವನ್ನು ಕಮಿಟಿ ಶ್ಲಾಘನೀಯವಾಗಿ ನಿರ್ವಹಿಸಿತು. ಸ್ಥಳದಲ್ಲಿ ಮಾಲಾದಾರಿಗಳು ಮತ್ತು ಸ್ವಾಮಿಗಳಿಂದ ಅಂಜುಮನ್ ಸದಸ್ಯರಿಗೆ ಧನ್ಯವಾದದ ಮಾತುಗಳು ಕೇಳಿಬಂದವು.

ಮುಖ್ಯ ಅತಿಥಿಗಳು ಮತ್ತು ಕಮಿಟಿ ಸದಸ್ಯರ ಉಪಸ್ಥಿತಿ ಕಾರ್ಯಕ್ರಮದಲ್ಲಿ ಸಹನಾ ಮೊಬೈಲ್ ಅಂಗಡಿ ಮಾಲೀಕರಾದ ವಿಜಯ್ ಸರ್ದಾರ್, ಅಂಜುಮನ್ ಕಮಿಟಿಯ ಗೌರವಾಧ್ಯಕ್ಷ ಅನ್ಸರ್ ಭಾಯಿ, ಅಧ್ಯಕ್ಷ ಹುಸೇನ್ ಭಾಷಾ, ಉಪಾಧ್ಯಕ್ಷ ಮುಸ್ತಫಾ, ಪ್ರಧಾನ ಕಾರ್ಯದರ್ಶಿ ಅಮೀನ್ ಭಾಯಿ, ಸಲೀಮ್, ಆಸೀಫ್, ಆರಿಫ್, ಇಬ್ರಾಹಿಂ, ಹಸನ್, ಆದಿಲ್, ರಫಿ ಸಂಪಂಗಿ, ರಜ್ಜಬ್ ಇವರೊಂದಿಗೆ ಮುಸ್ಲಿಂ ಸಮಾಜದ ಅನೇಕ ಮುಖಂಡರು ಹಾಜರಿದ್ದರು. ಅನ್ನ ಸೇವೆ ಕಾರ್ಯಕ್ರಮವನ್ನು ಸಮರ್ಪಕ ವ್ಯವಸ್ಥೆಯೊಂದಿಗೆ ಮುಗಿಸಲಾಗಿದ್ದು, ಭಾಗವಹಿಸಿದ ಪ್ರತಿಯೊಬ್ಬರೂ ಪರಸ್ಪರ ಸೌಹಾರ್ದತೆ ಹಾಗೂ ಬಾಂಧವ್ಯವನ್ನು ಹೃತ್ಪೂರ್ವಕವಾಗಿ ಮೆಚ್ಚಿಕೊಂಡರು.

## ಗ್ರಾಮೀಣ ಭಾಗದ ಆಸ್ಪತ್ರೆಗಳಲ್ಲಿ ತಜ್ಞ ವೈದ್ಯರ ನೇಮಕ ಮಾಡಿ: ಶ್ಯಾಮಸುಂದರ್ ಕಂಬದಾಳ್

ನೈಜ್ಯ ದೆಸೆ ನ್ಯೂಸ್

**ಮಾನ್ವಿ: ಪಟ್ಟಣದ ತಹಸೀಲ್ದಾರ್ ಕಚೇರಿಯಲ್ಲಿ ಬಹುಜನ ಸಮಾಜ ಪಾರ್ಟಿ ವತಿಯಿಂದ ರಾಜ್ಯ ಆರೋಗ್ಯ ಸಚಿವರಿಗೆ ಉಪತಹಸೀಲ್ದಾರ್ ವಿನಾಯಕರಾವ್ ರವರ ಮೂಲಕ ಮನವಿ ಸಲ್ಲಿಸಿ ರಾಜ್ಯ ಕಾರ್ಯದರ್ಶಿ ಶ್ಯಾಮಸುಂದರ್ ಕಂಬದಾಳ್ ಮಾತನಾಡಿ ರಾಜ್ಯದ ಗ್ರಾಮೀಣ ಭಾಗದಲ್ಲಿನ 270 ಸಮುದಾಯ ಆರೋಗ್ಯ ಕೇಂದ್ರಗಳಲ್ಲಿನ ಅರವಳಿಕೆ,ಮಕ್ಕಳ ತಜ್ಞರು, ಸ್ತ್ರೀರೋಗ ತಜ್ಞರನ್ನು ತಾಲೂಕು ಸಾರ್ವಜನಿಕ ಆಸ್ಪತ್ರೆಗಳಲ್ಲಿನ ವೈದ್ಯರ ಕೊರತೆ ನಿವಾರಣೆಗಾಗಿ ವರ್ಗಹಿಸುವುದಕ್ಕೆ ರಾಜ್ಯದ ಆರೋಗ್ಯ ಇಲಾಖೆ ಮುಂದಾಗಿರುವುದರಿಂದ ಗ್ರಾಮೀಣ ಭಾಗದ ಜನರು ಅಗತ್ಯ ವೈದ್ಯಕೀಯ ಸೌಲಭ್ಯಗಳಿಂದ ವಂಚಿತರಾಗಲಿದ್ದಾರೆ.**



ರಾಜ್ಯ ಸರ್ಕಾರವು ಬಡಜನರಿಗೆ ಅಗತ್ಯವಿರುವ ಜನ ಔಷಾಧಿ ಕೇಂದ್ರಗಳನ್ನು ಮುಚ್ಚಿದು ಇಂದುಸಮುದಾಯ ಆರೋಗ್ಯ ಕೇಂದ್ರಗಳಲ್ಲಿನ ವೈದ್ಯರನ್ನು ತಾಲೂಕು ಆಸ್ಪತ್ರೆಗಳಿಗೆ ನೀಡುವ ಮೂಲಕ ಗ್ರಾಮೀಣ ಭಾಗದ ಬಡ ಜನರ ಆರೋಗ್ಯದ ಮೇಲೆ ಗಂಭಿರವಾದ ಪರಿಣಾಮವಾಗಲಿರುವುದರಿಂದ ರಾಜ್ಯದ ಆರೋಗ್ಯ ಇಲಾಖೆಯು ಪುನರ್ ಪರಿಶೀಲಿಸಿ ಜನಪರವಾದ ಕ್ರಮ ಕೈಗೊಳ್ಳುವಂತೆ ಒತ್ತಾಯಿಸಿದರು. ಬಿ.ಎಸ್.ಪಿ, ತಾ.ಉಪಾಧ್ಯಕ್ಷರಾದ ವೆಂಕಟೇಶ್ ನಂದಿಹಾಳ್,ವಿರುಪನಗೌಡ ಜಟ್ಟಿ,ಹನುಮಂತ,ದುರ್ಗೇಶ್ ನೀರಮಾನ್ವಿ ಇದ್ದರು.

# ಜ.12 ರಂದು ವಿವಿಧ ಬೇಡಿಕೆಗಳನ್ನು ಈಡೆರಿಸುವಂತೆ ಒತ್ತಾಯಿಸಿ ಉಪವಾಸ ಸತ್ಯಾಗ್ರಹ ಗುರುರಾಜ್ ನಾಗಲಾಪುರ್

ನೈಜ್ಯ ದೆಸೆ ನ್ಯೂಸ್

**ಮಾನ್ವಿ: ಪಟ್ಟಣದ ಪತ್ರಿಕಾ ಭವನದಲ್ಲಿ ಸಮಾಜ ಸೇವಕರಾದ ಗುರುರಾಜ್ ನಾಗಲಾಪುರ್ ಮಾತನಾಡಿ ಪಟ್ಟಣದ ಚೀಕಲಪರ್ವಿ ರಸ್ತೆಯಲ್ಲಿ ಬರುವ ಕೋನಾಪುರ ಪೇಟೆ ಅಭಿವೃದ್ದಿಯಲ್ಲಿ ವಂಚಿತವಾಗಿದ್ದು ಅನೇಕ ಸಮಸ್ಯೆಗಳನ್ನು ಎದುರಿಸುತ್ತಿದ್ದರು ಕೂಡ ಸಂಬದಿಸಿದ ಅಧಿಕಾರಿಗಳು ಸ್ಪಂದಿಸದೆ ಇರುವುದರಿಂದ ಜ.12 ರಂದು ಕೋನಾಪುರ ಪೇಟೆಯಲ್ಲಿನ ಅಂಬೇಡ್ಕರ್ ನಗರದಲ್ಲಿ ಉಪವಾಸ ಸತ್ಯಾಗ್ರಹವನ್ನು ಹಮ್ಮಿಕೊಳ್ಳಲಾಗುವುದು.**

ಚೀಕಲಪರ್ವಿ ರಸ್ತೆಯಲ್ಲಿ ಪ್ರತಿದಿನ ಬಾರಿ ವಾಹನಗಳ ಸಂಚಾರ ದಿಂದಾಗಿ



ಸಾರ್ವಜನಿಕರಿಗೆ ತೊಂದರೆ ಉಂಟಾಗುತ್ತಿದ್ದು ವಾಹನ ದಟ್ಟಣೆ ನಿವಾರಣೆಗಾಗಿ ಬೈಪಾಸ್ ರಸ್ತೆಯನ್ನು ನಿರ್ಮಾಣ ಮಾಡಬೇಕು. ಪುರಸಭೆ ವತಿಯಿಂದ ನಿರಂತರವಾಗಿ ಶುದ್ಧವಾದ ಕುಡಿಯುವ ನೀರಿನ ಪೂರೈಕೆಗಾಗಿ ಕ್ರಮ ಕೈಗೊಳ್ಳಬೇಕು. ರಸ್ತೆಯಲ್ಲಿ ದೂಳು ಬಾರದಂತೆ ಅಗತ್ಯ ಕ್ರಮ ಕೈಗೊಳ್ಳಬೇಕು, ಪ್ರವಾಸಿ ಮಂದಿರದ ಹತ್ತಿರ ವಿರುವ ಸರ್ಕಾರಿ ಜಾಗದಲ್ಲಿ ಉದ್ಯಾನವನ ನೀರ್ಮಾಣ ಮಾಡಬೇಕು,


ಆರೋಗ್ಯ ಇಲಾಖೆಯಿಂದ ಸರ್ಕಾರಿ ಸಾರ್ವಜನಿಕ ಆಸ್ಪತ್ರೆಯಲ್ಲಿ ಸಾರ್ವಜನಿಕರಿಗೆ ಉತ್ತಮ ಆರೋಗ್ಯ ಸೌಲಭ್ಯ ಕಲ್ಪಿಸುವುದಕ್ಕಾಗಿ ಖಾಲಿ ಇರುವ ಹುದ್ದೆಗಳನ್ನು ತುಂಬುವುದಕ್ಕೆ ಅಗತ್ಯ ಕ್ರಮ ಕೈಗೊಳ್ಳಬೇಕು, ಅಗತ್ಯ ತಜ್ಞ ವೈದ್ಯರನ್ನು ಹಾಗೂ ಸಿಬ್ಬಂದಿಗಳನ್ನು ನೇಮಕಮಾಡಬೇಕು, ಪುರಸಭೆ ವತಿಯಿಂದ ಐತಿಹಾಸಿಕ ಸಂಜಿವರಾಯ ದೇವಸ್ಥಾನದ ಹತ್ತಿರ ತ್ಯಾಜ್ಯ ಸುರಿಯುತ್ತಿರುವುದರಿಂದ ಭಕ್ತರಿಗೆ ಅನಾನುಕೂಲವಾಗುತ್ತಿದ್ದು ಸ್ಥಳಾಂತರ ಮಾಡುವುದಕ್ಕೆ ಅಗತ್ಯ ಕ್ರಮ ಕೈಗೊಳ್ಳಬೇಕು. ಸೇರಿದಂತೆ ವಿವಿಧ ಬೇಡಿಕೆಗಳನ್ನು ಈಡೆರಿಸುವಂತೆ ಒತ್ತಾಯಿಸಿ ಪ್ರತಿಭಟನೆ ಹಮ್ಮಿಕೊಳ್ಳಲಾಗುವುದು ಎಂದು ತಿಳಿಸಿದರು. ನರಸಿಂಹ ಹೆಳವರ್,ವೆಂಕಟೇಶ ಯಾದವ್, ಆನಿಲ್ ಗೌಡ, ವೀರೇಶ ಯಾದವ್ ಇದ್ದರು.

## ರಾಷ್ಟ್ರಕ್ಕಾಗಿ ಮಧ್ಯಸ್ಥಿಕೆ ಅಭಿಯಾನ 2.ಔ : ನ್ಯಾ. ಉಂಡಿ ಮಂಜುಳಾ ಶಿವಪ್ಪ

ನೈಜ್ಯ ದೆಸೆ ನ್ಯೂಸ್

**ಲಿಂಗಸಗೂರು: ಜ 8 – ರಾಷ್ಟ್ರೀಯ ಕಾನೂನು ಸೇವೆಗಳ ಪ್ರಾಧಿಕಾರದ ನಿರ್ದೇಶನದಂತೆ ದೇಶದ ಎಲ್ಲ ನ್ಯಾಯಾಲಯಗಳಲ್ಲಿ ಜನವರಿ 2 2026 ರಿಂದ ಏಪ್ರಿಲ್ 2 2026 ರವರೆಗೆ 90 ದಿನಗಳ ಕಾಲ ನಡೆಯಲಿರುವ ರಾಷ್ಟ್ರಕ್ಕಾಗಿ ಮಧ್ಯಸ್ಥಿಕೆ ಎಂಬ ವಿಶೇಷ ಅಭಿಯಾನವನ್ನು (2.ಔ) ಹಮ್ಮಿಕೊಳ್ಳಲಾಗಿದೆ.**

ಬಾಕಿ ಇರುವ ಪ್ರಕರಣಗಳನ್ನು ಮಧ್ಯಸ್ಥಿಕೆ ಮೂಲಕ ರಾಜಿ ಆಗಬಹುದಾದ





ಪ್ರಕರಣಗಳ ವಿಶೇಷ ಮಧ್ಯಸ್ಥಿಕೆ ಅಭಿಯಾನ ಆಯೋಜಿಸಲಾಗಿದೆ. ಈ ಅಭಿಯಾನವು ದೇಶದ ಎಲ್ಲ ನ್ಯಾಯಾಲಯಗಳಲ್ಲಿ ಸಹ ನಡೆಯಲಿದೆ. ಅದೇ ರೀತಿ ಲಿಂಗಸಗೂರು ನ್ಯಾಯಾಲಯಗಳಲ್ಲಿ ಸಹ ರಾಜಿ ಆಗಬಹುದಾದ ಪ್ರಕರಣಗಳನ್ನು ಮಧ್ಯಸ್ಥಿಕೆ ಕೇಂದ್ರಗಳಿಗೆ ಕಳಿಸಿ ಅಲ್ಲಿ ವಿಶೇಷ ತರಬೇತಿ ಹೊಂದಿದ ಮಧ್ಯಸ್ಥಿಕೆಗಾರರಿಂದ ರಾಜಿಸಂಧಾನ ಮಾಡಿಸುವ ವ್ಯವಸ್ಥೆ ಇದಾಗಿದೆ. ಕಕ್ಷಿದಾರರು ಈ ಅಭಿಯಾನದ ಸದುಪಯೋಗ ಪಡೆದುಕೊಳ್ಳಬೇಕೆಂದು ಹಿರಿಯ ಶ್ರೇಣಿ ಸಿವಿಲ್ ನ್ಯಾದೀಶರು, ಹಾಗೂ ತಾಲೂಕ ಕಾನೂನು ಸೇವಾ ಸಮಿತಿಯ ಅಧ್ಯಕ್ಷರಾದ ನ್ಯಾ. ಉಂಡಿ ಮಂಜುಳಾ ಶಿವಪ್ಪ. ಹಾಗೂ ಪ್ರಧಾನ ಸಿವಿಲ್ ನ್ಯಾಯಾಧೀಶರು ಹಾಗೂ ಕಾನೂನು ಸೇವಾ ಸಮಿತಿ ಸದಸ್ಯ ಕಾರ್ಯದರ್ಶಿಗಳಾದ ನ್ಯಾ. ಅಂಬಣ್ಣ. ಕೆ ಪ್ರಧಾನ ಸಿವಿಲ್ ನ್ಯಾಯಾಧೀಶರು ಇವರು ಪತ್ರಿಕಾ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ನೈಜ್ಯ ದೆಸೆ
ಕನ್ನಡ ದಿನಪತ್ರಿಕೆಯನ್ನು ತಪ್ಪದೆ ಓದಿರಿ.

# ಬಹುತೇಕ ಅಧಿಕಾರಿಗಳು, ಸಿಬ್ಬಂದಿಯಲ್ಲಿ ಶಿಸ್ತು ಇಲ್ಲ: ಲೋಕಾಯುಕ್ತರ ಕಾರ್ಯದರ್ಶಿ ಅಸಮಾಧಾನ

ನೈಜ್ಯ ದೆಸೆ ನ್ಯೂಸ್

**ರಾಯಚೂರು: ಜನವರಿ 07 (ಕ.ವಾ.): ಜಿಲ್ಲೆಯ ಬಹುತೇಕ ಇಲಾಖೆಗಳಲ್ಲಿ ಕಡ್ಡಾಯವಾಗಿ ನಿರ್ವಹಣೆ ಆಗಲೇಬೇಕಾದ ನೌಕರರ ಹಾಜರಾತಿ ವಹಿ, ಚಲನವಹಿ, ನಗದು ವಹಿಗಳನ್ನು ಸರಿಯಾಗಿ ನಿರ್ವಹಿಸದೇ ಲೋಪ ಎಸಗುತ್ತಿರುವುದು ಲೋಕಾತಂಡದ ಕಾರ್ಯಾಚರಣೆ ವೇಳೆ ಕಂಡು ಬಂದಿದೆ ಎಂದು ಗೌರವಾನ್ವಿತ ಕರ್ನಾಟಕ ಲೋಕಾಯುಕ್ತರ ಕಾರ್ಯದರ್ಶಿಗಳಾದ ಶ್ರೀನಾಥ ಕೆ ಅವರು ತೀವ್ರ ಅಸಮಾಧಾನ ವ್ಯಕ್ತಪಡಿಸಿದರು.**

ನಗರದ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಜನವರಿ 7ರಂದು ಕರ್ನಾಟಕ ಲೋಕಾಯುಕ್ತ ಬೆಂಗಳೂರು ಇವರಿಂದ ನಡೆದ ವಿವಿಧ ಇಲಾಖೆಗಳ ಜಿಲ್ಲಾಮಟ್ಟದ ಅಧಿಕಾರಿಗಳೊಂದಿಗೆ ಪ್ರಗತಿ ಪರಿಶೀಲನಾ ಸಭೆಯಲ್ಲಿ ಅವರು ಮಾತನಾಡಿದರು. ಲೋಕಾ ತಂಡವು ಕಾರ್ಯಾಚರಣೆ ವೇಳೆ ಗಮನಿಸಿದಂತೆ ಬಹುತೇಕ ಇಲಾಖೆಗಳ ಅಧಿಕಾರಿಗಳು ಮತ್ತು ಸಿಬ್ಬಂದಿ ಗುರುತಿನ ಚೀಟಿ ಧರಿಸದೇ ಕೆಲಸ ನಿರ್ವಹಣೆ ಮಾಡುತ್ತಿದ್ದಾರೆ. ಗ್ರೂಪ್ ಡಿ ಸೇರಿದಂತೆ ಬೇರೆ ಬೇರೆ ಸಿಬ್ಬಂದಿಗೆ ನಿಗದಿಪಡಿಸಿದ ಡ್ರೆಸ್ ಕೋಡ್ ಪಾಲನೆಯಾಗಿಲ್ಲ. ಕಚೇರಿಗೆ ಹೋದಾಗ ಯಾರು ಏನು ಎಂದು ಏನೂ ತಿಳಿಯುವುದಿಲ್ಲ.





ಬಹುತೇಕ ಕಚೇರಿಗಳಲ್ಲಿ ನೇಮ್ ಪ್ಲೇಟ್ ಕಾಣಿಸಲಿಲ್ಲ. ಇದು ಕೂಡಲೇ ಸರಿಯಾಗಬೇಕು. ಈ ಬಗ್ಗೆ ಜಿಲ್ಲಾಮಟ್ಟದ ಅಧಿಕಾರಿಗಳು ಕೂಡಲೇ ಕ್ರಮವಹಿಸಬೇಕು ಎಂದು ಅವರು ಕಟ್ಟುನಿಟ್ಟಿನ ನಿರ್ದೇಶನ ನೀಡಿದರು. ಎಲ್ಲ ಕಚೇರಿಗಳಿಗೆ ಸುತ್ತೋಲೆ ರವಾನಿಸಿ ತಿಳಿಸಿದಾಗ್ಯೂ ಲೋಕಾಯುಕ್ತ ಅಧಿಕಾರಿಗಳ ಮಾಹಿತಿಯ ಫಲಕಗಳನ್ನು ಬಹುತೇಕ ಕಚೇರಿಗಳಲ್ಲಿ ಅಳವಡಿಸಿಲ್ಲ. ಸರ್ಕಾರಿ ನೌಕರರಿಗೆ ಅನ್ವಯಿಸುವ ಎಲ್ಲ ನಿಯಮಗಳು ಹೊರಗುತ್ತಿಗೆ ನೌಕರರಿಗು ಸಹ ಅನ್ವಯಿಸುತ್ತವೆ. ಆದಾಗ್ಯೂ ಹೊರಗುತ್ತಿಗೆ ನೌಕರರ ಹಾಜರಾತಿ ವಹಿಯನ್ನು ಬಹುತೇಕ ಕಚೇರಿಗಳಲ್ಲಿ ನಿರ್ವಹಣೆ ಮಾಡಿಲ್ಲ ಎಂದು ಬೇಸರ ವ್ಯಕ್ತಪಡಿಸಿದ ಅವರು, ತಪ್ಪಿತಸ್ಥ ಸರ್ಕಾರಿ ನೌಕರರ ಮೇಲೆ ಮೇಲೆ ಕ್ರಮವಹಿಸುವುದಷ್ಟೇ ನಮ್ಮ ಕೆಲಸವಲ್ಲ; ಸರ್ಕಾರದ ಆಡಳಿತ ವ್ಯವಸ್ಥೆಯನ್ನು ಸುಧಾರಿಸುವುದು ಸಹ ನಮ್ಮ ಕಾರ್ಯವಾಗಿದೆ. ಈ ದಿಶೆಯಲ್ಲಿ ತಂಡವು ಭೇಟಿ ನೀಡಿದ ವೇಳೆ ತಿಳಿಸಿದ ಅಂಶಗಳ ಬಗ್ಗೆ ಅರಿತು ಅಧಿಕಾರಿಗಳು ಮತ್ತು ಸಿಬ್ಬಂದಿ ಮಾರ್ಗಸೂಚಿ ಅಂಶಗಳನ್ನು ಪಾಲನೆ ಮಾಡಬೇಕು ಎಂದು ತಿಳಿಸಿದರು. ಜನವರಿ 2 ರಿಂದ ಜನವರಿ 7ರವರೆಗೆ ರಾಯಚೂರು ಜಿಲ್ಲೆಯ ವಿವಿಧೆಡೆಯಲ್ಲಿ ಲೋಕಾಯುಕ್ತ ಅಧಿಕಾರಿಗಳು ದಾಳಿ ನಡೆಸಿದ ವೇಳೆ ಕಂಡುಬಂದ ಲೋಪಗಳಿಗೆ ಸಂಬಂಧಿಸಿದಂತೆ ಪೊಲೀಸ್ ಹಾಗೂ ನ್ಯಾಯಾಂಗ ಇಲಾಖೆಯ ಅಧಿಕಾರಿಗಳಿಂದ ವರದಿ ಪಡೆದು ತಪ್ಪಿತಸ್ಥರ ಮೇಲೆ ವಿಚಾರಣೆಗೆ ಕ್ರಮವಹಿಸಲಾಗುವುದು.

ಗಂಭೀರ ಪ್ರಕರಣ ಎಂದು ಕಂಡುಬಂದಲ್ಲಿ ತಪ್ಪಿತಸ್ಥ ಅಧಿಕಾರಿಗಳು ಮತ್ತು ಸಿಬ್ಬಂದಿ ಮೇಲೆ ಕ್ರಿಮಿನಲ್ ಮೊಕದ್ದಮೆ ದಾಖಲಿಸಲಾಗುವುದು ಎಂದು ಅವರು ಎಚ್ಚರಿಕೆ ನೀಡಿದರು. ಈಗ



ಆಗಿರುವ ಲೋಪಗಳಿಗೆ ಸಂಬಂಧಿಸಿದಂತೆ ಯಾರಾದರು ಅಧಿಕಾರಿಗಳು ಮತ್ತು ಸಿಬ್ಬಂದಿ ತಪ್ಪು ಮಾಹಿತಿ ನೀಡಿದಲ್ಲಿ ಮತ್ತೆ ಜಿಲ್ಲಾ ಲೋಕಾಯುಕ್ತ ಅಧೀಕ್ಷಕರಿಂದ ಪರಿಶೀಲಿಸಿ ವರದಿ ಪಡೆದು ದೂರು ದಾಖಲಿಸುತ್ತೇವೆ ಎಂದು ತಿಳಿಸಿದರು.

**ಸೂಕ್ತ ಮಾರ್ಗದರ್ಶನಕ್ಕೆ ವರದಿ:** ಅಧಿಕಾರಿಗಳಿಗೆ ಸೂಕ್ತ ಮಾರ್ಗದರ್ಶನ ನೀಡುವುದಕ್ಕಾಗಿ, ಲೋಕಾ ತಂಡ ಭೇಟಿ ನೀಡಿ ಪರಿಶೀಲಿಸಿ ಪಟ್ಟಿ ಮಾಡಿದ ಲೋಪದೋಷಗಳ ಅಂಶಗಳ ಸಮಗ್ರ ವರದಿಯನ್ನು ಜಿಲ್ಲಾಧಿಕಾರಿಗಳಿಗೆ ನೀಡಲಾಗುವುದು ಎಂದು ಕಾರ್ಯದರ್ಶಿಗಳು ತಿಳಿಸಿದರು.

**ನಮ್ಮ ಹಂತದಲ್ಲೇ ಕ್ರಮ:** ಬೇರೆ ಬೇರೆ ಇಲಾಖೆಗಳಲ್ಲಿನ ಲೋಪದ ಬಗ್ಗೆ ಲೋಕಾಯುಕ್ತರು ನೀಡಿದ ಪಟ್ಟಿಯ ಮೇಲೆ ತಾವು ತಮ್ಮ ಹಂತದಲ್ಲಿ ಆಗುವುದನ್ನು ತ್ವರಿತವಾಗಿ ಸರಿಪಡಿಸುವುದಾಗಿ ಜಿಲ್ಲಾಧಿಕಾರಿಗಳಾದ ನಿತೀಶ್ ಕೆ ಅವರು ತಿಳಿಸಿದರು. ಶುದ್ಧ ಕುಡಿವ ನೀರಿನ ಘಟಕಗಳ ದುರಸ್ಥಿಗೆ ಹೆಚ್ಚಿನ ಒತ್ತು ಕೊಡುವುದಾಗಿ ಅವರು ಹೇಳಿದರು.

ಮುಂದಿನ ವಾರ ಎಲ್ಲ ಅಧಿಕಾರಿಗಳ ಸಭೆ ಕರೆದು ಪುನಃ ಚರ್ಚಿಸುವುದಾಗಿ ತಿಳಿಸಿದರು.

**ಇಲ್ಲಿಗೆ ಮುಗಿಯುವುದಿಲ್ಲ:** ಲೋಕಾಯುಕ್ತ ಭೇಟಿಯ ಬಿಸಿ ಇಲ್ಲಿಗೆ ಮುಗಿಯುವುದಿಲ್ಲ. ತಪ್ಪಿತಸ್ಥರಿಗೆ ಇನ್ಮುಂದೆ ನೊಟೀಸ್ ಬರುತ್ತವೆ. ಅಧಿಕಾರಿಗಳು ನೊಟೀಸಗಳನ್ನು ಹಗುರವಾಗಿ ಪರಿಗಣಿಸದೇ ಕೂಡಲೇ ಉತ್ತರ ನೀಡಬೇಕು. ಪ್ರಕರಣ ಗಂಭೀರ ಸ್ವರೂಪ ಹೊಂದಿದ್ದಲ್ಲಿ ಕ್ರಿಮಿನಲ್ ಪ್ರಕರಣ ಎದುರಿಸಬೇಕು ಎಂದು ಜಿಲ್ಲಾಧಿಕಾರಿಗಳು ಎಚ್ಚರಿಕೆ ನೀಡಿದರು. ಸಭೆಯಲ್ಲಿ ಕರ್ನಾಟಕ ಲೋಕಾಯುಕ್ತದ ಅಪರ ನಿಬಂಧಕರಾದ ಎ.ವಿ.ಪಾಟೀಲ, ರಾಯಚೂರು ಜಿಲ್ಲಾ ಕರ್ನಾಟಕ ಲೋಕಾಯುಕ್ತದ ಅಧೀಕ್ಷಕರಾದ ಸತೀಶ್ ಎಸ್ ಚಿಟಗುಬ್ಬಿ, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿಗಳಾದ ಅರುಣಾಂಕ್ಷ ಗಿರಿ, ಮಹಾನಗರ ಪಾಲಿಕೆಯ ಆಯುಕ್ತರಾದ ಜುಬಿನ್ ಮೊಹಪಾತ್ರ, ಲೋಕಾಯುಕ್ತದ ಡಿವೈಎಸ್ಪಿ ರವಿ ಪುರುಷೋತ್ತಮ ಹಾಗೂ ವಿವಿಧ ಇಲಾಖೆಗಳ ಜಿಲ್ಲಾಮಟ್ಟದ ಅಧಿಕಾರಿಗಳು ಉಪಸ್ಥಿತರಿದ್ದರು. ಅಪರ ಜಿಲ್ಲಾಧಿಕಾರಿ ಶಿವಾನಂದ ಅವರು ಸ್ವಾಗತಿಸಿದರು.

## ನೇಮಕಾತಿ ಪ್ರಕಟಣೆ

ಏಐಖಖಿಖ ನೇಮಕಾತಿ 2026–3 ಸಹಾಯಕ ವ್ಯವಸ್ಥಾಪಕ ಹುದ್ದೆಗಳಿಗೆ ಆನ್‌ಲೈನ್‌ನಲ್ಲಿ ಅರ್ಜಿ ಸಲ್ಲಿಸಿ KITS ನೇಮಕಾತಿ 2026: 3 ಸಹಾಯಕ ವ್ಯವಸ್ಥಾಪಕ ಹುದ್ದೆಗಳಿಗೆ ಅರ್ಜಿ ಸಲ್ಲಿಸಿ. ಕರ್ನಾಟಕ ನಾವೀನ್ಯತೆ ಮತ್ತು ತಂತ್ರಜ್ಞಾನ ಸಂಘವು ಜನವರಿ 2026 ರ KITS ಅಧಿಕೃತ ಅಧಿಸೂಚನೆಯ ಮೂಲಕ ಸಹಾಯಕ ವ್ಯವಸ್ಥಾಪಕ ಹುದ್ದೆಗಳನ್ನು ಭರ್ತಿ ಮಾಡಲು ಅರ್ಹ ಮತ್ತು ಆಸಕ್ತ ಅಭ್ಯರ್ಥಿಗಳಿಂದ ಅರ್ಜಿಗಳನ್ನು ಆಹ್ವಾನಿಸಿದೆ. ಬೆಂಗಳೂರಿನಲ್ಲಿ ವೃತ್ತಿಜೀವನವನ್ನು ಹುಡುಕುತ್ತಿರುವ ಉದ್ಯೋಗಾಕಾಂಕ್ಷಿಗಳು – ಕರ್ನಾಟಕ ಸರ್ಕಾರ ಈ ಅವಕಾಶವನ್ನು ಬಳಸಿಕೊಳ್ಳಬಹುದು. ಆಸಕ್ತ ಅಭ್ಯರ್ಥಿಗಳು ಜನವರಿ 22, 2026 ರಂದು ಅಥವಾ ಮೊದಲು ಆನ್‌ಲೈನ್‌ನಲ್ಲಿ ಅರ್ಜಿ ಸಲ್ಲಿಸಬಹುದು. ಆನ್‌ಲೈನ್‌ನಲ್ಲಿ ಅರ್ಜಿ ಸಲ್ಲಿಸಲು ಪ್ರಾರಂಭ ದಿನಾಂಕ: 07–01–2026 ಆನ್‌ಲೈನ್‌ನಲ್ಲಿ ಅರ್ಜಿ ಸಲ್ಲಿಸಲು ಕೊನೆಯ ದಿನಾಂಕ: 22–ಜನವರಿ–2026 ಅಧಿಕೃತ ವೆಬ್‌ಸೈಟ್: k-tech.karnataka.gov.in

## ಏಪ್ರಿಲ್‌ನಿಂದ ಹೊಸ ಆದಾಯ ತೆರಿಗೆ ಕಾನೂನು

ನೈಜ್ಯ ದೆಸೆ ನ್ಯೂಸ್

**ನವದೆಹಲಿ: ಕೇಂದ್ರ ಸರ್ಕಾರವು ಏಪ್ರಿಲ್ 1, 2026 ರಿಂದ ದೇಶದಲ್ಲಿ ಹೊಸ ಆದಾಯ ತೆರಿಗೆ ಕಾನೂನನ್ನು (ಆದಾಯ ತೆ–ರಿಗೆ ಕಾಯ್ದೆ, 2025) ಜಾರಿಗೆ ತರಲಿದೆ. ಈ ಹೊಸ ಕಾನೂನು 1961 ರಿಂದ ಅಸ್ತಿತ್ವದಲ್ಲಿರುವ ಹಳೆಯ ಕಾನೂನನ್ನು ಬದಲಾಯಿಸುತ್ತದೆ. ಹೊಸ ಕಾನೂನಿನ ಮುಖ್ಯ ಉದ್ದೇಶ ತೆರಿಗೆ ಪ್ರಕ್ರಿಯೆಯನ್ನು ಸರಳಗೊಳಿಸುವುದು ಮತ್ತು ಸಾಮಾನ್ಯ ಜನರಿಗೆ ಸಂಕೀರ್ಣತೆಯನ್ನು ಕಡಿಮೆ ಮಾಡುವುದು.**




ಹೊಸ ನಿಯಮಗಳ ಪ್ರಕಾರ, ಈಗ ಸಂಬಳ ಪಡೆಯುವ ವರ್ಗವು 12 ಲಕ್ಷದವರೆಗಿನ ವಾರ್ಷಿಕ ಆದಾಯದ ಮೇಲೆ ಯಾವುದೇ ತೆರಿಗೆಯನ್ನು ಪಾವತಿಸಬೇಕಾಗಿಲ್ಲ. ಇದರ ಜೊತೆಗೆ, ತೆರಿಗೆಗಳನ್ನು ಸಲ್ಲಿಸಲು ಇಲ್ಲಿಯವರೆಗೆ ಬಳಸಲಾಗುತ್ತಿದ್ದ 'ಮೌಲ್ಯಮಾಪನ ವರ್ಷ' ಮತ್ತು 'ಹಿಂದಿನ ವರ್ಷ' ನಂತಹ ಕಠಿಣ ಪದಗಳನ್ನು ತೆಗೆದುಹಾಕಲಾಗುತ್ತದೆ ಮತ್ತು ಈಗ 'ತೆರಿಗೆ ವರ್ಷ' ಎಂಬ ಪದವನ್ನು ಮಾತ್ರ ಬಳಸಲಾಗುತ್ತದೆ. ಪ್ರಸ್ತುತ ಆದಾಯ ತೆರಿಗೆ ಕಾಯ್ದೆಯನ್ನು 1961 ರಲ್ಲಿ ಜಾರಿಗೆ ತರಲಾಯಿತು ಮತ್ತು ಅಂದಿನಿಂದ ಹಲವಾರು ಬಾರಿ ತಿದ್ದುಪಡಿ ಮಾಡಲಾಗಿದೆ. ಇದು ತುಂಬಾ ಜಟಿಲವಾಗಿದೆ. ಸರ್ಕಾರವು ಹೊಸ ಕಾನೂನಿನಲ್ಲಿನ ವಿಭಾಗಗಳ ಸಂಖ್ಯೆಯನ್ನು 819 ರಿಂದ 536 ಕ್ಕೆ ಇಳಿಸಿದೆ. ಭಾಷೆಯನ್ನು ಎಷ್ಟು ಸರಳವಾಗಿ ಇರಿಸಲಾಗಿದೆ ಎಂದರೆ ಸಾಮಾನ್ಯ ತೆರಿಗೆದಾರರು ಸಹ ತಾನು ಎಷ್ಟು ತೆರಿಗೆ ಪಾವತಿಸಬೇಕು ಮತ್ತು ಯಾವ ನಮೂನೆಗಳನ್ನು ಭರ್ತಿ ಮಾಡಬೇಕು ಎಂಬುದನ್ನು ಅರ್ಥಮಾಡಿಕೊಳ್ಳಬಹುದು. ಅಧ್ಯಾಯಗಳ ಸಂಖ್ಯೆಯನ್ನು 47 ರಿಂದ 23 ಕ್ಕೆ ಇಳಿಸಲಾಗಿದೆ. 612.75 ಲಕ್ಷದವರೆಗಿನ ಆದಾಯ ತೆರಿಗೆ ಮುಕ್ತವಾಗಿದೆ. ಹೊಸ ತೆರಿಗೆ ವ್ಯವಸ್ಥೆಯ ಪ್ರಕಾರ, ಈಗ 4 ಲಕ್ಷದವರೆಗಿನ ಆದಾಯಕ್ಕೆ ಶೂನ್ಯ ತೆರಿಗೆ ವಿಧಿಸಲಾಗುತ್ತದೆ. ಅದರ ನಂತರ, 12 ಲಕ್ಷದವರೆಗಿನ ಆದಾಯದ ಮೇಲಿನ ವಿನಾಯಿತಿಯನ್ನು 60,000 ಕ್ಕೆ ಹೆಚ್ಚಿಸಲಾಗಿದೆ. ಇದರರ್ಥ ನಿಮ್ಮ ವಾರ್ಷಿಕ ಆದಾಯ 12 ಲಕ್ಷವಾಗಿದ್ದರೆ, ವಿನಾಯಿತಿ ಪಡೆದ ನಂತರ, ಒಂದು ರೂಪಾಯಿ ತೆರಿಗೆಯನ್ನು ಪಾವತಿಸಬೇಕಾಗಿಲ್ಲ. ಇದಕ್ಕೆ ?75,000 ಪ್ರಮಾಣಿತ ಕಡಿತವನ್ನು ಕೂಡ ಸೇರಿಸಿದರೆ, ?12.75 ಲಕ್ಷದವರೆಗಿನ ಸಂಬಳವು ಸಂಪೂರ್ಣವಾಗಿ ತೆರಿಗೆ ಮುಕ್ತವಾಗಿರುತ್ತದೆ. ಇಲ್ಲಿಯವರೆಗೆ, ತೆರಿಗೆದಾರರು 'ಹಿಂದಿನ ವರ್ಷ' (ಹಣ ಗಳಿಸಿದ ವರ್ಷ) ಮತ್ತು 'ಮೌಲ್ಯಮಾಪನ ವರ್ಷ' (ತೆರಿಗೆ ಪಾವತಿಸಿದ ವರ್ಷ) ನಡುವೆ ಗೊಂದಲಕ್ಕೊಳಗಾಗುತ್ತಿದ್ದರು. ಹೊಸ ಕಾನೂನಿನಲ್ಲಿ ಇವೆರಡನ್ನೂ ರದ್ದುಗೊಳಿಸಲಾಗಿದೆ. ಈಗ 'ತೆರಿಗೆ ವರ್ಷ' ಮಾತ್ರ ಇರುತ್ತದೆ. ಅಂದರೆ, ನೀವು ಗಳಿಸುವ ವರ್ಷವನ್ನು ನಿಮ್ಮ ತೆ–ರಿಗೆ ವರ್ಷವೆಂದು ಪರಿಗಣಿಸಲಾಗುತ್ತದೆ. ತೆರಿಗೆ ಸಲ್ಲಿಕೆ ಮತ್ತು ಲೆಕ್ಕಾಚಾರದಲ್ಲಿ ಪಾರದರ್ಶಕತೆಯನ್ನು ಕಾಪಾಡಿಕೊಳ್ಳಲು ಜಾಗತಿ–ಕ ಮಾನದಂಡಗಳಿಗೆ ಅನುಗುಣವಾಗಿ ಇದನ್ನು ಮಾಡಲಾಗಿದೆ.

ನೈಜ್ಯ ದೆಸೆ
ಕನ್ನಡ ದಿನಪತ್ರಿಕೆಯನ್ನು ತಪ್ಪದೆ ಓದಿರಿ.

# ಜೈ ಭೀಮ್ ಘರ್ಜನೆ ಸಂಘದಿಂದ ಶಾಲಾ ಮಕ್ಕಳಿಗೆ ನೋಟ್ ಬುಕ್ ಪೆನ್, ಬ್ಯಾಗ್ ವಿತರಣೆ ಪತ್ರಕರ್ತರಿಗೆ ಸನ್ಮಾನ.

ನೈಜ್ಯ ದೆಸೆ ನ್ಯೂಸ್

**ಗುಣಮಟ್ಟದ ಶಿಕ್ಷಣ ಸರ್ಕಾರಿ ಶಾಲೆಯಲ್ಲಿ ಸಿಗುತ್ತದೆ. ಉತ್ತಮ ಶಿಕ್ಷಕರನ್ನ ಸರ್ಕಾರ ನೇಮಕ ಮಾಡಿರುತ್ತದೆ. ಶಿಕ್ಷಕರ ನೇಮಕಾತಿಯಲ್ಲಿ ವಿವಿಧ ಪರೀಕ್ಷೆಗಳನ್ನು ಸರ್ಕಾರ ಒಡ್ಡಿ, ಅದರಲ್ಲಿ ಉತ್ತಮ ಶ್ರೇಣಿಯಲ್ಲಿಯೇ ತೇರ್ಗಡೆಯಾದ ಶಿಕ್ಷಕರನ್ನು ಆಯ್ಕೆಮಾಡಿ ಕಳಿಸಿರುತ್ತದೆ ಯಾವ ಖಾಸಗಿ ಶಾಲೆಗಳಿಗೂ ಕಮ್ಮಿಯಿಲ್ಲ ಸರ್ಕಾರಿ ಶಾಲೆಗಳು, ಅಷ್ಟರಮಟ್ಟಿಗೆ ಶಿಕ್ಷಣ ಸರ್ಕಾರಿ ಶಾಲೆಗಳಲ್ಲಿ ಸಿಗುತ್ತಿದೆ ಇದರ ಸದುಪಯೋಗವನ್ನು ಮಕ್ಕಳು ಬಡ ಪಾಲಕರು ಪಡೆದುಕೊಳ್ಳಬೇಕು ಎಂದು ಬಿ.ಆರ್.ಪಿ ಬಸವರಾಜ ಆನೆಗುಂದಿ ಹೇಳಿದರು.**

ತಾಲೂಕು ಸಮಿತಿ ಜೈ ಭೀಮ್ ಘರ್ಜನೆ ಸಂಘದ ಪದಾಧಿಕಾರಿಗಳು ಹಾಗೂ ಸಂಸ್ಥಾಪಕ ಮತ್ತು ಅಧ್ಯಕ್ಷ ನಿರುಪಾದಿ ಸಾಸಲಮರಿ ಅವರ ವತಿಯಿಂದ ನಗರದ ಸುಕಾಲಪೇಟೆಯ ಪಿಎಂಶ್ರೀ ಉನ್ನತೀಕರಿಸಿದ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಯ ವಿದ್ಯಾರ್ಥಿಗಳಿಗೆ ಜ.7 ಬುಧವಾರದಂದು ನೋಟ್ ಬುಕ್, ಪೆನ್, ಮತ್ತು ಶಾಲಾ ಬ್ಯಾಗ್ ವಿತರಣೆ ಹಾಗೂ



ಕರ್ನಾಟಕ ರಾಜ್ಯ ಕಾರ್ಯನಿರತ ಪತ್ರಕರ್ತರ ಸಂಘದ ಸಿಂಧನೂರು ತಾಲೂಕು ಮತ್ತು ಜಿಲ್ಲಾ ಸಮಿತಿಗೆ ಆಯ್ಕೆಯಾದ ಪತ್ರಕರ್ತರಿಗೆ ಸನ್ಮಾನ ಕಾರ್ಯಕ್ರಮದಲ್ಲಿ ಸಸಿಗೆ ನೀರು ಹಾಕುವ ಮೂಲಕ ಉದ್ಘಾಟಿಸಿ ಮಾತನಾಡಿದರು. ನಂತರ ಕರ್ನಾಟಕ ರಾಜ್ಯ ಕಾರ್ಯನಿರತ ಪತ್ರಕರ್ತರ ಸಂಘದ ತಾಲೂಕು ಅಧ್ಯಕ್ಷ ಶರಣಪ್ಪ ಕೆ ಗೋನಾಳ ಮಾತನಾಡಿ, ಸಂವತ್ಸರ, ತಿಂಗಳಗಳು, ಋತುಗಳು, ವಾರಗಳು ಕೇಳಿ ವಿದ್ಯಾರ್ಥಿಗಳ ಕಲಿಕಾ ವಿಧಾನ ಪ್ರಶ್ನಿಸಿದರು.

ಮಕ್ಕಳು ಕೊಟ್ಟ ಉತ್ತರಕ್ಕೆ ಭೇಷ್ ಎಂದು ಮಾತು ಮುಂದುವರಿಸಿ ಸರ್ಕಾರಿ ಶಾಲೆಯಲ್ಲಿ ಸಿಗುವ ಸಂಸ್ಕೃತಿ, ಸಾಂಸ್ಕೃತಿಕ, ಪಠ್ಯೇತರ ಚಟುವಟಿಕೆಗಳು ಖಾಸಗಿ ಶಾಲೆಗಳಲ್ಲಿ ಸಿಗುವುದು ಕಡಿಮೆ, ಇಲ್ಲಿ ಉತ್ತಮ ನುರಿತ ಶಿಕ್ಷಕರು ಸಿಗುತ್ತಾರೆ. ಖಾಸಗಿ ಶಾಲೆಗಳಲ್ಲಿ ಸಿಗುವುದು ಕಡಿಮೆ, ಆದರೂ ಇಂದಿನ ಯುಗದಲ್ಲಿ ಖಾಸಗಿ ಶಾಲೆಗಳತ್ತ ಮುಖ ಮಾಡಿ ಆರ್ಥಿಕ ತೊಂದರೆ ಅನುಭವಿಸುತ್ತಿದ್ದೇವೆ. ಸರ್ಕಾರಿ ಶಾಲೆಗಳನ್ನು ಉಳಿಸಿ ಬೆಳಸಿದಾಗ ಮಾತ್ರ ಬಡವರ ಮಕ್ಕಳು ಬೆಳಕಿಗೆ ಬರಲು ಸಾಧ್ಯ ಎಂದರು. ಶಾಲೆಯ ಎಸ್.ಡಿ.ಎಮ್.ಸಿ ಅಧ್ಯಕ್ಷ ಹೊನ್ನೂರು ಕಟ್ಟಿಮನಿ ಪ್ರಾಸ್ತಾವಿಕವಾಗಿ ಮಾತನಾಡಿದರು. ಜೈ ಭೀಮ್ ಘರ್ಜನೆ ಸಂಘದ ಸಂಸ್ಥಾಪಕ ಹಾಗೂ ಅಧ್ಯಕ್ಷ ನಿರುಪಾದಿ ಸಾಸಲಮರಿ ಸಂಘಟನೆ ಉದ್ದೇಶ ಮತ್ತು ಅದರ ಧ್ಯೆಯಗಳ ಬಗ್ಗೆ ತಿಳಿಸಿದರು.

ಈ ವೇಳೆ: ಉಪಾಧ್ಯಕ್ಷರಾದ ಹೊನ್ನೂರು ಕಟ್ಟಿಮನಿ, ಚನ್ನಬಸವ ಯೆದ್ದಲ್ಲದೊಡ್ಡಿ, ಪ್ರಧಾನ ಕಾರ್ಯದರ್ಶಿ ಸಿದ್ದಪ್ಪ ಸೋಮಲಾಪುರ, ವೀರೇಶ ಬೂದಿವಾಳ ಕ್ಯಾಂಪ್, ಕಾರ್ಯಾಧ್ಯಕ್ಷ ಬಾಲರಾಜ ವಿರುಪಾಪುರ, ಸಂಘಟನಾ ಕಾರ್ಯದರ್ಶಿ ವೀರೇಶ ಬೂದಿವಾಳ, ಸಹಕಾರ್ಯದರ್ಶಿ ಮುನಿಯಪ್ಪ ತಿಮ್ಮಾಪುರ, ಕಾರ್ಯದರ್ಶಿ ಹುಲಗಪ್ಪ ಸತ್ಯವತಿ ಕ್ಯಾಂಪ್, ವೀರೇಶ ಬೆಳಗುರ್ಕಿ, ಖಜಾಂಚಿ ಆದ–'ೀಶ ಮಲ್ಲಾಪುರ, ಮುಖಂಡ ಹಾರೂನ್ ಜಾಗೀರದಾರ್, ರಫೀ, ಶಾಲೆಯ ಮುಖ್ಯ ಗುರುಗಳಾದ ಗುರುಬಸಯ್ಯ ಹಿರೇಮಠ, ತುರ್ವಿಹಾಳ ವಲಯದ ಈ.ಸಿ.ಓ.ಕುಮಾರಸ್ವಾಮಿ, ಕನಕ ನಗರ ವಲಯ ಸಿ.ಆರ್.ಪಿ.ಹನುಮಂತಪ್ಪ ಸೇರಿದಂತೆ ಶಾಲೆಯ ಶಿಕ್ಷಕರು ಹಾಗೂ ವಿದ್ಯಾರ್ಥಿಗಳು ಇದ್ದರು.

# ಅಂಬಾದೇವಿ ಜಾತ್ರೆ ಸ್ವಸಹಾಯ ಗುಂಪುಗಳ ಉತ್ಪನ್ನಗಳ ಮಾರಾಟ ಮೇಳ ವಸ್ತು ಪ್ರದರ್ಶನ ಯಶಸ್ವಿ.




ನೈಜ್ಯ ದೆಸೆ ನ್ಯೂಸ್

**ಜಿಲ್ಲಾ ಮಟ್ಟದ ವಸ್ತು ಪ್ರದರ್ಶನ ಮತ್ತು ಮಾರಾಟ ಮೇಳವನ್ನು ತಾಲೂಕಿನ ಸಿದ್ದಪರ್ವತ ಅಂಬಾಮಠದ ಅಂಬಾದೇವಿ ಜಾತ್ರೆಯ ಪ್ರಯುಕ್ತ ಕೌಶಲ್ಯಾಭಿವೃದ್ಧಿ ಉದ್ಯಮಶೀಲತೆ ಮತ್ತು ಜೀವನೋಪಾಯ ಇಲಾಖೆ, ಸಂಜೀವಿನಿ ಕರ್ನಾಟಕ ರಾಜ್ಯ ಗ್ರಾಮೀಣ ಜೀವನೋಪಾಯ ಅಭಿಯಾನ, ಜಿಲ್ಲಾ ಪಂಚಾಯತ್, ತಾಲೂಕು ಪಂಚಾಯತಿ, ತಾಲೂಕು ಇಂದಿರಾಗಾಂಧಿ ಸ್ತ್ರೀ ಶಕ್ತಿ ಒಕ್ಕೂಟ, ಜ್ಞಾನ ಸಂಜೀವಿನಿ ಗ್ರಾಮ ಪಂಚಾಯಿತಿ ಮಟ್ಟದ ಒಕ್ಕೂಟ ಆರ್.ಎಚ್.ನಂ–1ರ ಸಂಯುಕ್ತಾಶ್ರಯದಲ್ಲಿ ಜಾತ್ರೆಯ ಪ್ರಯುಕ್ತ ಹಮ್ಮಿಕೊಂಡು ಯಶಸ್ವಿಗೊಳಿಸಲಾಯಿತು.**

ಜ.1 ರಿಂದ 6 ರವರೆಗೆ ಅಂಬಾಮಠದ ಜಾತ್ರೆಯ ಅಂಗವಾಗಿ ಆಯೋಜಿಸಲಾಗಿದ್ದ ಕಾರ್ಯಕ್ರಮವನ್ನು ಶಾಸಕ ಹಂಪನಗೌಡ ಬಾದರ್ಲಿ ಉದ್ಘಾಟಿಸಿ ಚಾಲನೆ ನೀಡಿದ್ದರು. ಜಿಲ್ಲಾ ಮಟ್ಟದ ಸ್ವಸಹಾಯ ಗುಂಪುಗಳ ಉತ್ಪನ್ನಗಳ ಮಾರಾಟ ಮೇಳ ಮತ್ತು ವಸ್ತು ಪ್ರದರ್ಶನ ಆಯೋಜಿಸಿದ್ದು, ಜಿಲ್ಲೆಯ ರಾಯಚೂರು, ಮಾನ್ವಿ, ದೇವದುರ್ಗ, ಮಸ್ಕಿ, ಸಿರವಾರ, ಲಿಂಗಸೂಗುರು, ಹಾಗೂ ಸಿಂಧನೂರು ತಾಲೂಕಿನ ಫಲಾನುಭವಿಗಳು ಯೋಜನೆಯ ಸೌಲಭ್ಯಗಳನ್ನು ಪಡೆದು ಸ್ವಂತ ಚಟುವಟಿಕೆಗಳನ್ನು ಸಹ ಪ್ರಾರಂಭಿಸಿದ್ದಾರೆ.

ತಾವು ಮಾಡಿದ ಉತ್ಪನ್ನಗಳ ಒಟ್ಟು ಪ್ರದರ್ಶನ ಮತ್ತು ಮಾರಾಟ ಮೇಳಕ್ಕೆ ಪ್ರತಿದಿನ 35ಕ್ಕೂ ಹೆಚ್ಚು ಗುಂಪು ಉತ್ಪನ್ನಗಳು, ವಿವಿಧ ಬಗೆಯ ಚಟ್ನಿ, ರೊಟ್ಟಿ, ಸಿಹಿ ತಿನಿಸುಗಳು, ಕೈಕಸೂತಿಗಳು (ಹಾರ, ಬ್ಯಾಸ್ಕೆಟ್, ಶಾಲು) ಊದುಬತ್ತಿ, ದೂಪ, ಕರ್ಪೂರ, ಲಂಬಾಣಿ ಡ್ರೆಸ್ ಗಳು ಮುಂತಾದ ಅನೇಕ ಉತ್ಪನ್ನಗಳ ಜೊತೆಗೆ ಜ.1ರಿಂದ 6ರವರೆಗೆ ಭಾಗವಹಿಸಿ ಕಾರ್ಯಕ್ರಮ ಯಶಸ್ವಿಯಾಗಿ ಅದ್ದೂರಿಯಾಗಿ ಮುಗಿಸಲಾಯಿತು.

ಈ ಸಂದರ್ಭದಲ್ಲಿ: ಶಾಸಕ ಹಂಪನಗೌಡ ಬಾದರ್ಲಿ, ರಾಜ್ಯ ಒಕ್ಕೂಟದ ಕಾರ್ಯದರ್ಶಿಗಳು ಹಾಗೂ ಜಿಲ್ಲಾ ಮತ್ತು ತಾಲೂಕು ಸ್ತ್ರೀ ಶಕ್ತಿ ಒಕ್ಕೂಟದ ಅಧ್ಯಕ್ಷರಾದ ಶ್ರೀದೇವಿ ಶ್ರೀನಿವಾಸ, ಅಂಬಾದೇವಿ ಸಮಿತಿ ಅಧ್ಯಕ್ಷ ರಂಗನಗೌಡ ಗೊರೇಬಾಳ, ಸಹಾಯಕ ನಿರ್ದೇಶಕ ಅಮರಗುಂಡಪ್ಪ, ಶಿಶು ಅಭಿವೃದ್ಧಿ ಯೋಜನೆ ಅಧಿಕಾರಿಗಳಾದ ಲಿಂಗನಗೌಡ, ಅಶೋಕ ತುರ್ವಿಹಾಳ, ಎನ್.ಆರ್.ಎಲ್.ಎಮ್ ಜಿಲ್ಲಾ ವ್ಯವಸ್ಥಾಪಕ ಶ್ರೀಕಾಂತ ಬನ್ನಿಗೋಳ, ಮೇಲ್ವಿಚಾರಕರು, ಸಿಬ್ಬಂದಿಗಳು, ಒಕ್ಕೂಟದ ಪದಾಧಿಕಾರಿಗಳು ಅಂಗನವಾಡಿ ಕಾರ್ಯಕರ್ತೆಯರು, ಭಾಗವಹಿಸಿದ್ದರು.

# ಬಳಗಾನೂರ್ ಪಟ್ಟಣ ಪಂಚಾಯಿತಿ ಮೇಲೆ ಲೋಕಾಯುಕ್ತ ದಾಳಿ

ನೈಜ್ಯ ದೆಸೆ ನ್ಯೂಸ್

**ಬಳಗಾನೂರು: ಜನವರಿ 07: ಪಟ್ಟಣ ಪಂಚಾಯಿತಿ ಆಡಳಿತಾತ್ಮಕ ಕಾರ್ಯವಿಧಾನ, ದಾಖಲೆ ನಿರ್ವಹಣೆ ಮತ್ತು ಹಣಕಾಸು ವ್ಯವಹಾರಗಳ ಕುರಿತು ಸಾರ್ವಜನಿಕ–ರಿಂದ ಬಂದಿರುವ ಅನೇಕ ದೂರುಗಳ ಹಿನ್ನೆಲೆಯಲ್ಲಿ ಲೋಕಾಯುಕ್ತ ಪೊಲೀಸ್ ತಂಡವು ಬುಧವಾರ ಅಚಾನಕ್ ದಾಳಿ ನಡೆಸಿ ಸವಿವರ ಪರಿಶೀಲನೆ ನಡೆಸಿದೆ.**

ದಾಳಿ ನಡೆಸಿದ ತಂಡ ಲೋಕಾಯುಕ್ತ ಪೊಲೀಸ್ ಉಪನಿರೀಕ್ಷಕ ರವರ ನೇತೃತ್ವದಲ್ಲಿ ನಡೆದ ಕಾರ್ಯಾಚರಣೆಯಲ್ಲಿ ಹಲವಾರು ಸಿಬ್ಬಂದಿ ಸದಸ್ಯರು ಭಾಗವಹಿಸಿದ್ದರು. ದೂರುಗಳ ಹಿನ್ನೆಲೆ ಉಪಲೋಕಾಯುಕ್ತ ವೀರಪ್ಪ ಅವರು ಕೆಲವು ತಿಂಗಳುಗಳ ಹಿಂದೆ ರಾಯಚೂರಿಗೆ ಭೇಟಿ ನೀಡಿದಾಗ, ಪಟ್ಟಣ ಪಂಚಾಯಿತಿಯ ಅನಿಯಮಿತತೆ, ಸಾರ್ವಜನಿಕ ಸೇವೆಗಳಲ್ಲಿನ ವಿಳಂಬ, ಕೆಲಸಕಾರ್ಯದ ಗುಣಮಟ್ಟದ ಕೊರತೆ,



ಹೀಗೆ ಒಂದರ ಹಿಂದೆ ಒಂದು ದೂರುಗಳು ದಾಖಲಾಗಿದ್ದವು. ಈ ಹಿನ್ನೆಲೆಯಲ್ಲಿ ವಿಷಯವನ್ನು ಗಂಭೀರವಾಗಿ ಪರಿಗಣಿಸಿದ ಲೋಕಾಯುಕ್ತ ಕಚೇರಿ, ನೇರ ಪರಿಶೀಲನೆ ನಡೆಸಲು ತಂಡವನ್ನು ನಿಯೋಜಿಸಿತು.

ಪರಿಶೀಲನೆಯಲ್ಲಿದ್ದ ಪ್ರಮುಖ ಅಂಶಗಳು ತಂಡವು ಪಟ್ಟಣ ಪಂಚಾಯಿತಿ ಕೆಳಗಿನ ವಿಭಾಗಗಳನ್ನು ಸವಿವರವಾಗಿ ಪರಿಶೀಲಿಸಿತು: ಪಟ್ಟಣ ಪಂಚಾಯಿತಿ ಬಜೆಟ್ ಮತ್ತು ಹಣ–ಕಾಸು ದಾಖಲೆಗಳು ಕೊಳಚೆ ನಿವಾರಣೆ, ನೀರು ಪೂರೈಕೆ ಕಾರ್ಯಗಳ ವೆಚ್ಚದ ದಾಖಲೆ ಕಾಮಗಾರಿ ಹಸ್ತಾಂತರ ಮತ್ತು ಗುತ್ತಿಗೆ ದಾಖಲೆ ತೆರಿಗೆ ಸಂಗ್ರಹಣೆ ಮತ್ತು ಫಲಾನುಭವಿಗಳ ವಿವರ ಸಿಬ್ಬಂದಿಗಳ ಹಾಜರು ಮತ್ತು ಕರ್ತವ್ಯ ನಿರ್ವಹಣೆ ಲೋಕಾಯುಕ್ತ ದಾಳಿಯ ಪ್ರಮುಖ ಗುರಿ ಸಾರ್ವಜನಿಕರಿಂದ ಬಂದಿರುವ ದೂರುಗಳ ವಾಸ್ತವಿಕತೆ ಪರಿಶೀಲನೆ ಆಡಳಿತದಲ್ಲಿ ನಡೆದಿರಬಹುದಾದ ಕರ್ತವ್ಯಲೋಪ,

ನಿಧಿಗಳ ದುರುಪಯೋಗ ತನಿಖೆ ಅಧಿಕಾರಿ–ಸಿಬ್ಬಂದಿಗಳ ಜವಾಬ್ದಾರಿ ನಿಗದಿಪಡಿಸುವುದು ಅನಿಯಮಿತತೆ ಕಂಡುಬಂದರೆ ತಕ್ಷಣ ಕ್ರಮ ಕೈಗೊಳ್ಳುವುದು ತಂಡವು ಎಲ್ಲಾ ದಾಖಲೆಗಳನ್ನು ಸಂಗ್ರಹಿಸಿ ಮೈದಾನ ಪರಿಶೀಲನೆ ನಡೆಸಿದ ನಂತರ, ವಿವರಣೆಗಳನ್ನು ದಾಖಲಿಸಿಕೊಂಡಿದೆ. ಮುಂದಿನ ಹಂತದಲ್ಲಿ ಲೋಕಾಯುಕ್ತ ಅಧಿಕಾರಿಗಳು ಈಗ ಸಂಗ್ರಹಿಸಿದ ಮಾಹಿತಿಯ ಆಧಾರದ ಮೇಲೆ ವಿವರವಾದ ವರದಿ ಸಿದ್ಧಪಡಿಸುತ್ತಿದ್ದು, ವರದಿ ಪೂರ್ಣಗೊಂಡ ನಂತರ ಕರ್ತವ್ಯ ಲೋಪ, ಹಣಕಾಸು ಅವ್ಯವಹಾರ, ಅಧಿಕಾರದ ದುರುಪಯೋಗ ಇವು ಕಂಡುಬಂದರೆ ಸಂಬಂಧಿತ ಅಧಿಕಾರಿಗಳ ವಿರುದ್ಧ ಕಾನೂನು ಕ್ರಮ ಕೈಗೊಳ್ಳಲಾಗುವುದು ಎಂದು ಮೂಲಗಳು ತಿಳಿಸಿವೆ. ಈ ದಾಳಿಯಿಂದ ಪಟ್ಟಣದಲ್ಲಿ ಸಾಕಷ್ಟು ಚರ್ಚೆ ಮೂಡಿದಂತಾಗಿದೆ.

# ಲೋಕಾಯುಕ್ತದಲ್ಲಿ ದೂರುಗಳ ಪ್ರಮಾಣ ಹೆಚ್ಚುತ್ತಿರುವುದು ದುರದೃಷ್ಟಕರ: ಲೋಕಾಯುಕ್ತರ ಕಾರ್ಯದರ್ಶಿ ಶ್ರೀನಾಥ ಕೆ ಕಳವಳ

ನೈಜ್ಯ ದೆಸೆ ನ್ಯೂಸ್

**ರಾಯಚೂರು: ಜನವರಿ 07 (ಕ.ವಾ.): ಕರ್ನಾಟಕ ಲೋಕಾಯುಕ್ತದಲ್ಲಿ 2022ರಲ್ಲಿ ಇದ್ದ 8000 ಕೇಸಗಳ ಪ್ರಮಾಣವು ಈಗ 2025ರ ಹೊತ್ತಿಗೆ 45,000ಕ್ಕೆ ಏರಿದ್ದು ದುರದೃಷ್ಟಕರ ಎಂದು ಗೌರವಾನ್ವಿತ ಕರ್ನಾಟಕ ಲೋಕಾಯುಕ್ತರ ಕಾರ್ಯದರ್ಶಿಗಳಾದ ಶ್ರೀನಾಥ ಕೆ ಅವರು ಕಳವಳ ವ್ಯಕ್ತಪಡಿಸಿದರು.**

ನಗರದ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಜನವರಿ 7ರಂದು ಕರ್ನಾಟಕ ಲೋಕಾಯುಕ್ತ ಬೆಂಗಳೂರು ಇವರಿಂದ ನಡೆದ ವಿವಿಧ ಇಲಾಖೆಗಳ ಜಿಲ್ಲಾಮಟ್ಟದ ಅಧಿಕಾ–ರಿಗಳೊಂದಿಗೆ ಪ್ರಗತಿ ಪರಿಶೀಲನಾ ಸಭೆಯ ಬಳಿಕ ಕರ್ನಾಟಕ ಲೋಕಾಯುಕ್ತದ ಅಪರ ನಿಬಂಧಕರಾದ ಎ.ವಿ.ಪಾಟೀಲ ಅವರೊಂದಿಗೆ ಪತ್ರಿಕಾಗೋಷ್ಠಿ ನಡೆಸಿ ಅವರು ಮಾತನಾಡಿದರು. ಸರ್ಕಾರದ ಕೆಲಸ ದೇವರ ಕೆಲಸ ಎಂದು ಅಥ–'ೖಸಲಾಗಿದೆ. ಸರ್ಕಾರಿ ನೌಕರಿ ಪಡೆಯುವ ಅಧಿಕಾರಿಗಳು ಮತ್ತು ಸಿಬ್ಬಂದಿ ಅದೃಷ್ಟವಂತರು. ಅವರ ಬಗ್ಗೆ ಸಮಾಜದಲ್ಲಿ ವಿಶೇಷ ಗೌರವ ಇರುತ್ತದೆ. ಆದರೆ, ಇದನ್ನು ಕೆಲವು ಅಧಿಕಾರಿಗಳು ಮತ್ತು ಸಿಬ್ಬಂದಿ ಅರಿಯದೇ ಹಣದ ಆಸೆಗಾಗಿ



ಲೋಪ ಎಸಗುತ್ತಿರುವುದು ಕಂಡು ಬರುತ್ತಿದೆ. ಅಧಿಕಾರಿಗಳು ಮತ್ತು ಸಿಬ್ಬಂದಿ ಲೋಪವೆಸಗಿ ವಾರಂಟ್ ಸ್ವೀಕರಿಸುವ ಹಂತಕ್ಕೆ ತಲುಪಿದ್ದು ನೋವಿನ ಸಂಗತಿ ಎಂದು ಅವರು ತಿಳಿಸಿದರು.

ಕೆರೆಗಳ ಸುರಕ್ಷತೆಗೆ ಒತ್ತು: ಕೆರೆ ಒತ್ತುವರಿ ಹಿನ್ನೆಲೆಯಲ್ಲಿ 2018ರಲ್ಲೇ ಲೋಕಾಯುಕ್ತದಿಂದ ರಾಜ್ಯದ ಎಲ್ಲ ಕಡೆಗೆ ಕೇಸ್ ದಾಖಲಿಸಲಾಗಿದೆ. ರಾಯಚೂರು ಜಿಲ್ಲೆಯಲ್ಲಿ ಒಟ್ಟು 587 ಕೆರೆಗಳಿದ್ದು, ಜನರ ಜೀವನಾಡಿಯಾದ ಈ ಕೆರೆಗಳ ಸುರಕ್ಷತೆಗೆ ಒತ್ತು ಕೊಡಬೇಕು.

ಜಿಲ್ಲೆಯಲ್ಲಿ 46 ಕೆರೆಗಳ ಒತ್ತುವರಿ ತಡೆದಿದ್ದೇವೆ ಎಂದು ಅಧಿಕಾರಿಗಳು ವರದಿ ನೀಡಿದ್ದಾರೆ. 319 ಕೆರೆಗಳ ಸರ್ವೆ ನಡೆಸಿದ ಬಗ್ಗೆ ನಕ್ಷೆ ನೀಡಬೇಕು ಎಂದು ಎಡಿಎಲ್‌ಆರ್ ಅವ–ರಿಗೆ ಸೂಚನೆ ನೀಡಲಾಗಿದೆ ಎಂದು ತಿಳಿಸಿದರು.

155 ಘಟಕ ನಿಷ್ಕ್ರಿಯ; ಅಸಮಾಧಾನ: ಅರಕೇರಾದಲ್ಲಿ 72, ದೇವದುರ್ಗದಲ್ಲಿ 72, ಲಿಂಗಸಗೂರುದಲ್ಲಿ 114, ಮಸ್ಕಿಯಲ್ಲಿ 66, ರಾಯಚೂರುದಲ್ಲಿ 107, ಸಿಂಧನೂರನಲ್ಲಿ 116 ಮತ್ತು ಸಿರವಾರದಲ್ಲಿ 57 ಸೇರಿ ಜಿಲ್ಲೆಯಲ್ಲಿ ಒಟ್ಟು 716 ಶುದ್ಧ ಕುಡಿವ ನೀರಿನ ಘಟಕಗಳ ಪೈಕಿ 561 ಘಟಕಗಳು ಮಾತ್ರ ಸುಸ್ಥಿತಿಯಲ್ಲಿವೆ. 155 ಘಟಕಗಳು ನಿಷ್ಕ್ರಿಯವಾಗಿದ್ದು, ಈ ಬಗ್ಗೆ ಸಂಬಂಧಿಸಿದ ಅಧಿಕಾರಿಗಳು ವರದಿ ನೀಡಬೇಕು ಎಂದು ಅಧಿಕಾ–ರಿಗಳಿಗೆ ನಿರ್ದೇಶನ ನೀಡಲಾಗಿದೆ ಎಂದರು.

ನಾಯಿಗಳ ಹಾವಳಿ ತಡೆಗೆ ಕ್ರಮವಹಿಸಿ: ಸಾರ್ವಜನಿಕ ಸ್ಥಳಗಳಲ್ಲಿ ಬೀದಿನಾಯಿಗಳ ಹಾವಳಿ ನಿಯಂತ್ರಿಸಲೇಬೇಕು ಎಂದು ಸುಪ್ರೀಂ ಕೋರ್ಟ್ ಕಟ್ಟುನಿಟ್ಟಿನ ಸೂಚನೆ ನೀಡಿದಾಗ್ಯೂ ರಾಯಚೂರು ನಗರ ಸೇರಿದಂತೆ ಸಿಂಧನೂರ, ಮಾನವಿ, ಲಿಂಗಸೂರು, ದೇವದುರ್ಗ, ಮಸ್ಕಿ, ಸಿರವಾರ, ಅರಕೇರಾ ಯಾವುದೆ ಕಡೆಗಳಲ್ಲಿ ಏನೂ ಕ್ರಮಗಳಾಗದೇ ನಗರಸಭೆ, ಪುರಸಭೆ, ಪಟ್ಟಣ ಪಂಚಾಯಿತಿ ಅಧಿಕಾರಿಗಳು ಸುಮ್ಮನಿದ್ದು, ಈ ಬಗ್ಗೆ ಕೂಡಲೇ ಕ್ರಮ ಜರುಗಿಸಿ ವಿವರವಾದ ವರದಿ ನೀಡವೇಕು ಎಂದು ಅಧಿಕಾರಿಗಳಿಗೆ ಸೂಚಿಸಲಾಗಿದೆ ಎಂದರು.

ಬಯಲುಶೌಚ ಮುಕ್ತ ಜಿಲ್ಲೆಯಾಗಲಿ: ಈಗಲು ರೋಡ್ ಪಕ್ಕ ಕುಳಿತು ಬಯಲು ಶೌಚ ಮಾಡುವ ಪರಿಸ್ಥಿತಿ ರಾಯಚೂರು ಸೇರಿದಂತೆ ಈ ಭಾಗದ ಜಿಲ್ಲೆಗಳಲ್ಲಿ ಕಾಣುತ್ತಿದೆ. ರಾಯಚೂರು ಜಿಲ್ಲೆಯಲ್ಲಿ ಶೌಚಾಲಯ ಪರಿಸ್ಥಿತಿಯ ಚಿತ್ರಣ ಸಿಕ್ಕಿಲ್ಲ. ಸಿಇಓ ಅವರಿಂದ ಮಾಹಿತಿ ಪಡೆದು ಪರಿಶೀಲಿಸುತ್ತೇವೆ ಎಂದು ಅವರು ತಿಳಿಸಿದರು.

69 ಚೆಕ್‌ಪೋಸ್ಟಗಳ ಮೇಲೆ ನಿಗಾ: ಬೀದರ ಜಿಲ್ಲೆಯ ಹುಮನಾಬಾದ್ ಬಳಿಯ ಚೆಕ್‌ಪೋಸ್ಟ್ ಮೂಲಕ ಸಂಚರಿಸುವ ವಾಹನಗಳ ಚಾಲಕರಿಂದ ಕೆಲವು ಆರ್‌ಟಿಓ ಅಧಿಕಾರಿಗಳು ಮತ್ತು ಸಿಬ್ಬಂದಿ ಹಾಡಹಗಲೇ ಅನಧೀಕೃತವಾಗಿ ಹಣ ವಸೂಲಿ ಮಾಡುವ ಕೃತ್ಯವನ್ನು ನಮ್ಮ ಲೋಕಾ ತಂಡವು ಬೇಧಿಸಿದೆ. ಈ ಬಗ್ಗೆ ಎಫ್‌ಐಆರ್ ದಾಖಲಿಸಿದೆ. ಈ ಜಾಲ ಎಲ್ಲಾ ಕಡೆ ಇರಬಹುದು ಎಂದು ಯೋಚಿಸಿ ರಾಯಚೂರು ಚೆಕ್ ಪೋಸ್ಟಗಳ ಮೇಲೆ ನಿಗಾ ಇಡಲಾಗುವುದು ಎಂದು ಶ್ರೀನಾಥ ಕೆ ಅವರು ತಿಳಿಸಿದರು. ಪತ್ರಿಕಾಗೋಷ್ಠಿಯಲ್ಲಿ ಜಿಲ್ಲಾಧಿಕಾರಿಗಳಾದ ನಿತೀಶ್ ಕೆ., ಲೋಕಾಯುಕ್ತದ ಅಧೀಕ್ಷಕರಾದ ಸತೀಶ್ ಎಸ್ ಚಿಟಗುಬ್ಬಿ, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿಗಳಾದ ಅರುಣಾಂಕ್ಷ ಗಿರಿ, ಮಹಾನಗರ ಪಾಲಿಕೆಯ ಆಯುಕ್ತರಾದ ಜುಬಿನ್ ಮೊಹಪಾತ್ರ ಹಾಗೂ ಇನ್ನೀತರರು ಇದ್ದರು.

## ಶಿಕ್ಷಣ ಮಾರ್ಗದರ್ಶಿ ವಿಶೇಷ

### M. ಫಾರ್ಮ್ ಫಾರ್ಮಕಾಲಜಿ

M. ಫಾರ್ಮ್ ಫಾರ್ಮಕಾಲಜಿ (M. Pharm Pharmacology) ಕೋರ್ಸ್ ಎಂದರೆ ಔಷಧಗಳ ಅಧ್ಯಯನದಲ್ಲಿ ಪರಿಣತಿ ಪಡೆಯಲು ಇರುವ ಸ್ನಾತಕೋತ್ತರ ಪದವಿ, ಇದು ಔಷಧಗಳ ಪರಿಣಾಮ, ಕಾರ್ಯವಿಧಾನ, ಮತ್ತು ಸುರಕ್ಷತೆ ಬಗ್ಗೆ ಆಳವಾದ ಜ್ಞಾನ ನೀಡುತ್ತದೆ;ಔಷಧಶಾಸ್ತ್ರಜ್ಞರು ಪ್ರಿಕ್ಲಿನಿಕಲ್ ಮತ್ತು ಕ್ಲಿನಿಕಲ್ ಸಂಶೋಧನೆ ಎರಡರ ಅವಿಭಾಜ್ಯ ಅಂಗವಾಗಿದ್ದಾರೆ ಮತ್ತು ಆಣ್ವಿಕ ಅಥವಾ ಇನ್ ವಿಟ್ರೊ ಔಷಧಶಾಸ್ತ್ರದಲ್ಲಿ ಅತ್ಯಗತ್ಯ ಪಾತ್ರವನ್ನು ವಹಿಸುತ್ತಾರೆ, ಇದು ಔಷಧ ಆವಿಷ್ಕಾರ ಮತ್ತು ಅಭಿವೃದ್ಧಿಗೆ ಸಹಾಯ ಮಾಡಲು ಮುಖ್ಯವೆಂದು ಪರಿಗಣಿಸಲಾಗಿದೆ. ಹೀಗಾಗಿ, ಕೌಶಲ್ಯಪೂರ್ಣ ಔಷಧಶಾಸ್ತ್ರಜ್ಞರ ಬೇಡಿಕೆ ನಿರಂತರವಾಗಿ ಹೆಚ್ಚುತ್ತಿದೆ ಮತ್ತು ಔಷಧೀಯ ಉದ್ಯಮದ ವಿಸ್ತರಣೆಯನ್ನು ಪ್ರತಿಬಿಂಬಿಸುತ್ತದೆ. ಔಷಧ ಅನ್ವೇಷಣೆ ಪ್ರಕ್ರಿಯೆಯಲ್ಲಿ ಆಣ್ವಿಕ ಔಷಧಶಾಸ್ತ್ರದ ತತ್ವಗಳ ಜೊತೆಗೆ ಔಷಧಶಾಸ್ತ್ರ ಮತ್ತು ಔಷಧ ಚಿಕಿತ್ಸೆಯಲ್ಲಿನ ಇತ್ತೀಚಿನ ಪ್ರಗತಿಗಳ ಜ್ಞಾನವನ್ನು ಅನ್ವಯಿಸುವುದು ಮತ್ತು ಪ್ರಾಣಿಗಳು ಮತ್ತು ಪರಿಸರದಲ್ಲಿನ ಪ್ರಾಯೋಗಿಕ ಕಾರ್ಯವಿಧಾನಗಳಿಗೆ ಅನ್ವಯಿಸುವ ಎಲ್ಲಾ ಕಾನೂನುಗಳು, ನಿಯಮಗಳು, ಸುರಕ್ಷತೆ ಮತ್ತು ನೈತಿಕ ಮಾನದಂಡಗಳನ್ನು ಎತ್ತಿಹಿಡಿಯುವುದು. ಇದರ ಅವಧಿ 2 ವರ್ಷ, B.Pharm ಪೂರ್ಣಗೊಳಿಸಿರಬೇಕು ಮತ್ತು ಪ್ರವೇಶಕ್ಕಾಗಿ GPAT/CUET-PG ನಂತಹ ಪ್ರವೇಶ ಪರೀಕ್ಷೆಗಳಿರುತ್ತವೆ; ಪಠ್ಯಕ್ರಮದಲ್ಲಿ ಅಡ್ವಾನ್ಸ್ಡ್ ಫಾರ್ಮಕಾಲಜಿ, ಕ್ಲಿನಿಕಲ್ ಫಾರ್ಮಕಾಲಜಿ, ಟಾಕ್ಸಿಕಾಲಜಿ ಮತ್ತು ರಿಸರ್ಚ್ ಮೆಥಡಾಲಜಿ ಸೇರಿವೆ. ಕೋರ್ಸ್ ವಿವರಣೆ: ಉದ್ದೇಶ: ಜೀವಂತ ಜೀವಿಗಳ ಮೇಲೆ ಔಷಧಗಳ ಪರಿಣಾಮ, ಅವುಗಳ ಕಾರ್ಯವಿಧಾನಗಳು (pharmacodynamics), ದೇಹದಲ್ಲಿ ಅವುಗಳ ಚಲನೆ (pharmacokinetics), ಮತ್ತು ವಿಷತ್ವ (toxicity) ಅಧ್ಯಯನ ಮಾಡುವುದು. ಅವಧಿ: 2 ವರ್ಷಗಳು (4 ಸೆಮಿಸ್ಟರ್‌ಗಳು), ಸಂಶೋಧನಾ ಪ್ರಬಂಧ (thesis) ಸೇರಿದಂತೆ. ಅರ್ಹತೆ: ಮಾನ್ಯತೆ ಪಡೆದ ವಿಶ್ವವಿದ್ಯಾಲಯದಿಂದ B.Pharm ಪದವಿ ಪೂರ್ಣಗೊಳಿಸಿರಬೇಕು. B.Pharm ನಲ್ಲಿ ಕನಿಷ್ಠ 50–60% ಅಂಕಗಳು (ಸಂಸ್ಥೆಗಳ ಮೇಲೆ ಅವಲಂಬಿತ). ಪ್ರವೇಶ ಪ್ರಕ್ರಿಯೆ: ಪ್ರವೇಶ ಪರೀಕ್ಷೆಗಳು: GPAT, CUET-PG ಅಥವಾ ಕಾಲೇಜುಗಳ ಸ್ವಂತ ಪರೀಕ್ಷೆಗಳ ಮೂಲಕ ಪ್ರವೇಶ. ಅರ್ಜಿ: ಕಾಲೇಜುಗಳ ವೆಬ್‌ಸೈಟ್‌ನಲ್ಲಿ ಅರ್ಜಿ ಸಲ್ಲಿಸುವುದು, ದಾಖಲೆಗಳನ್ನು ಅಪ್‌ಲೋಡ್ ಮಾಡುವುದು ಮತ್ತು ಶುಲ್ಕ ಪಾವತಿಸುವುದು. ಕೋರ್ಸ್‌ನಲ್ಲಿರುವ ಪ್ರಮುಖ ವಿಷಯಗಳು: ಅಡ್ವಾನ್ಸ್ಡ್ ಫಾರ್ಮಕಾಲಜಿ: ಔಷಧಗಳ ಪರಸ್ಪರ ಕ್ರಿಯೆಗಳು ಮತ್ತು ಗ್ರಾಹಕ ಕಾರ್ಯವಿಧಾನಗಳ ಆಳವಾದ ಅಧ್ಯಯನ. ಕ್ಲಿನಿಕಲ್ ಫಾರ್ಮಕಾಲಜಿ: ಔಷಧ ಅಭಿವೃದ್ಧಿ ಮತ್ತು ಕ್ಲಿನಿಕಲ್ ಪ್ರಯೋಗಗಳ ಬಗ್ಗೆ ಗಮನ. ಫಾರ್ಮಕನೆಟಿಕ್ಸ್ ಮತ್ತು ಬಯೋಫಾರ್ಮಾಸ್ಯುಟಿಕ್ಸ್: ಔಷಧ ಹೀರಿಕೊಳ್ಳುವಿಕೆ, ವಿತರಣೆ, ಚಯಾಪಚಯ ಮತ್ತು ವಿಸರ್ಜನೆಯ ತಿಳುವಳಿಕೆ. ಟಾಕ್ಸಿಕಾಲಜಿ: ಪ್ರತಿಕೂಲ ಪರಿಣಾಮಗಳು ಮತ್ತು ವಿಷದ ಮೌಲ್ಯಮಾಪನ. ಆಣ್ವಿಕ ಫಾರ್ಮಕಾಲಜಿ: ಆಣ್ವಿಕ ಮತ್ತು ಆನುವಂಶಿಕ ಮಟ್ಟದಲ್ಲಿ ಔಷಧಗಳ ಅಧ್ಯಯನ. ಸಂಶೋಧನಾ ವಿಧಾನ ಮತ್ತು ಬಯೋಸ್ಟಾಟಿಸ್ಟಿಕ್ಸ್: ಸಂಶೋಧನೆಗಳನ್ನು ನಡೆಸುವ ವಿಧಾನಗಳನ್ನು ಕಲಿಸುತ್ತದೆ. ಉದ್ಯೋಗಾವಕಾಶಗಳು: ಔಷಧೀಯ ಕಂಪನಿಗಳು. ಸಂಶೋಧನಾ ಸಂಸ್ಥೆಗಳು. ನಿಯಂತ್ರಣ ಸಂಸ್ಥೆಗಳು (Regulatory bodies). ಆಸ್ಪತ್ರೆಗಳು ಮತ್ತು ಆರೋಗ್ಯ ಸಂಸ್ಥೆಗಳು. ಡ್ರಗ್ ಇನ್ಸ್‌ಪೆಕ್ಟರ್, ಡ್ರಗ್ ಕಂಟ್ರೋಲರ್, ಹಾಸ್ಪಿಟಲ್ ಫಾರ್ಮಸಿಸ್ಟ್.

ನೈಜ್ಯ ದೆಸೆ
ಕನ್ನಡ ದಿನಪತ್ರಿಕೆಯನ್ನು ತಪ್ಪದೆ ಓದಿರಿ.

# ಪ್ರಜಾಪ್ರಭುತ್ವದಲ್ಲಿ ಮತದಾನ ಪಾತ್ರ ದೊಡ್ಡದು: ಪಿ.ಎಸ್.ವಸ್ತ್ರದ್

❑ ನೈಜ್ಯ ದೆಸೆ ನ್ಯೂಸ್

**ರಾಯಚೂರು: ಜನವರಿ 07 (ಕರ್ನಾಟಕ ವಾರ್ತೆ): ಪ್ರಜಾಪ್ರಭುತ್ವದಲ್ಲಿ ಮತದಾನದ ಪಾತ್ರ ಬಹಳ ದೊಡ್ಡದಾಗಿದೆ. ಚುನಾವಣೆಯ ವೇಳೆಯಲ್ಲಿ ಈ ಪ್ರಕ್ರಿಯೆಯನ್ನು ವಿವಿಧ ಹಂತದ ಅಧಿಕಾರಿಗಳು ಅಚ್ಚುಕಟ್ಟಾಗಿ ಕಾರ್ಯನಿರ್ವಣೆ ಮಾಡುವುದರ ಮೂಲಕ ಯಶಸ್ವಿಗೊಳಿಸಬೇಕೆಂದು ರಾಜ್ಯ ಸ್ವೀಪ್ ಸಮಿತಿ ನೊಡಲ್ ಅಧಿಕಾರಿ ಪಿ.ಎಸ್.ವಸ್ತ್ರದ್ ಅವರು ಹೇಳಿದರು.**

ಜನವರಿ 07ರ ಬುಧವಾರ ದಂದು ನಗರದ ಜಿಲ್ಲಾ ಪಂಚಾಯತಿಯ ಜಲ ನಿರ್ಮಲ ಸಭಾಂಗಣದಲ್ಲಿ ಸ್ವೀಪ್.ಮತ್ತು ಎನ್.ವಿ.ಡಿ ಸ್ಪರ್ಧಾ ಚಟುವಟಿಕೆಗಳ ಪ್ರಗತಿ ಪರಿಶೀಲನಾ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು. ಒಂದೊಂದು ಮತ ಅಭ್ಯರ್ಥಿಯ ಸೋಲು ಮತ್ತು ಗೆಲುವನ್ನು ನಿರ್ಧಾರ ಮಾಡುವ ಶಕ್ತಿ ಇದೆ. ಈಗ ತಮಗೆಲ್ಲ ಗೊತ್ತಿರುವ ಹಾಗೆ ಮತಯಂತ್ರದ ಮೂಲಕ ಮತದಾನದ ಪ್ರಕ್ರಿಯೆ ನಡೆಯುತ್ತಲಿದೆ. ಎಲ್ಲವೂ ಪಾರದರ್ಶಕವಾಗಿ ಚುನಾವಣೆಯ ಕಾರ್ಯಗಳು ಜರಗುತ್ತವೆ.



ರಾಷ್ಟ್ರೀಯ ಮತದಾರರ ದಿನಾಚರಣೆ ಅಂಗವಾಗಿ ವಿದ್ಯಾರ್ಥಿಗಳಲ್ಲಿ ಸ್ಪರ್ಧೆಗಳನ್ನು ಮಾಡಲಾಗಿತ್ತು. ಇವು ವಿದ್ಯಾರ್ಥಿಗಳಲ್ಲಿ ಮತದಾನದ ಮಹತ್ವ ಚುನಾವಣೆಯ ಪ್ರಕ್ರಿಯೆಗಳನ್ನು ತಿಳಿಸಲು ಬಹಳ ಸಹಾಯಕವಾಗಿದೆ. ಪ್ರತಿಯೊಂದು ಪ್ರೌಢ ಶಾಲೆ, ಪದವಿ ಪೂರ್ವ ಕಾಲೇಜು. ಹಾಗೂ ಪದವಿ ಮತ್ತು ಸ್ನಾತಕೋತ್ತರ ಶೈಕ್ಷಣಿಕ ಸಂಸ್ಥೆಗಳಲ್ಲಿ ಮತದಾರರ ಸಾಕ್ಷರತಾ ಕ್ಲಬ್‌ನ್ನು ಸ್ಥಾಪಿಸಲಾಗಿದೆ ಎಂದರು.

ವಿದ್ಯಾರ್ಥಿಗಳಲ್ಲಿ ಸ್ವೀಪ್ ಕಾರ್ಯಕ್ರಮದ ಅಡಿಯಲ್ಲಿ ರಾಷ್ಟ್ರೀಯ ಮತದಾರ ದಿನಾಚರಣೆಯ ಅಂಗವಾಗಿ ಸ್ಪರ್ಧೆಗಳನ್ನು ಆಯೋಜನೆ ಮಾಡುವುದರ ಮೂಲಕ ಪ್ರಜಾಪ್ರಭುತ್ವದ ಆಡಳಿತ ವ್ಯವಸ್ಥೆಯಲ್ಲಿ ಮತದಾನದ ಪ್ರಕ್ರಿಯೆಗಳು, ಚುನಾವಣೆಯ ಅಂಶಗಳು ಮತ್ತು ಅದರ ಮಹತ್ವವನ್ನು ತಿಳಿದುಕೊಳ್ಳಲು ಇಂತಹ ಸ್ಪರ್ಧೆಗಳು ಸಾಯಕವಾಗಿವೆ. ಅಲ್ಲದೆ ಮಾದರಿಯ ಮತದಾರರ ಪಟ್ಟಿಯ ಸಿದ್ಧಪಡಿಸಲು ಮತಗಟ್ಟೆಯ ಅಧಿಕಾರಿಗಳು ಮಾಡಬೇಕಾದ ಕಾರ್ಯ ಚಟುವಟಿಕೆಗಳು ಕುರಿತು ಮಾಹಿತಿ ನೀಡಿದರು. ರಾಯಚೂರು ಜಿಲ್ಲೆಯ ರಾಷ್ಟ್ರೀಯ ಮತದಾರ ದಿನಾಚರಣೆಯ ಕಾರ್ಯಕ್ರಮಗಳು ನಾವು ಕಳಿಸಿದ ಸುತ್ತೋಲೆಯಂತೆ ಸಮಯಕ್ಕೆ ಸರಿಯಾಗಿ ತಾಲೂಕ, ಜಿಲ್ಲಾ ಮತ್ತು. ರಾಜ್ಯ ಮಟ್ಟದ ಸ್ಪರ್ಧೆಗಳನ್ನು ಆಯೋಜನೆ ಮಾಡಬೇಕೆಂದರು.

ಇದೇ ಸಂದರ್ಭದಲ್ಲಿ ರಾಯಚೂರು ಕೃಷಿ ವಿಜ್ಞಾನಗಳ ವಿಶ್ವವಿದ್ಯಾಲಯ ಕುಲಪತಿಗಳಾದ ಡಾ.ಎಂ. ಹನುಮಂತಪ್ಪ, ಜಿಲ್ಲಾ ಪಂಚಾಯತ್ ಸಹಾಯಕ ಕಾರ್ಯದರ್ಶಿ ರಾಘವೇಂದ್ರ ಕುಲಕರ್ಣಿ, ಚುನಾವಣೆ ತಹಸಿಲ್ದಾರ್ ಪರಶುರಾಮ, ಪದವಿ ಪೂರ್ವ ಶಿಕ್ಷಣ ಇಲಾಖೆಯ ಉಪ ನಿರ್ದೇಶಕರಾದ ಸೋಮಶೇಖರ ಹೋಕ್ರಾಣಿ, ರಾಷ್ಟ್ರೀಯ ಮತದಾರರ ದಿನಾಚರಣೆ ಕಾರ್ಯಕ್ರಮದ ನೋಡಲ್ ಅಧಿಕಾರಿ ಡಾ. ದಂಡಪ್ಪ ಬಿರಾದಾರ, ಆದಿಕವಿ ಮಹರ್ಷಿ ವಾಲ್ಮೀಕಿ ವಿಶ್ವವಿದ್ಯಾಲಯ, ವಿವಿಧ ವೈದ್ಯಕೀಯ ಕಾಲೇಜಿನ ಹಾಗೂ ವಿವಿಧ ಇಂಜಿನಿಯರಿಂಗ್ ಕಾಲೇಜಿನ ಉಪನ್ಯಾಸಕರು, ತಾಲೂಕ ಆರೋಗ್ಯ ಅಧಿಕಾರಿಗಳು, ಶಾಲಾ ಶಿಕ್ಷಣ ಹಾಗೂ ಸಾಕ್ಷರತಾ ಇಲಾಖೆಯ ಮತ್ತು ಜಿಲ್ಲಾ ಡಯಟ್ ಕಾಲೇಜಿನ ಅಧಿಕಾರಿಗಳು ಸಭೆಯಲ್ಲಿ ಇದ್ದರು.

# ವಿಶೇಷ ಮತಪಟ್ಟಿ ಪರಿಷ್ಕರಣೆ (SIR) ಕುರಿತು ಸಾಮಾಜಿಕ ಚಿಂತನೆ ಸಂವಾದ ಸಭೆಗೆ ಆಹ್ವಾನ



❑ ನೈಜ್ಯ ದೆಸೆ ನ್ಯೂಸ್

**ಸಿಂಧನೂರು: ನಗರದ ಮಿಲಾಪ ಶಾದಿ ಮಹಲ್ ನಲ್ಲಿ ಜ 07 ರಂದು ನಡೆದ ಪ್ರಗತಿಪರ ಚಿಂತಕರು ಹಾಗೂ ಸಮಾನ ವಯಸ್ಕರ ಸಂಘಟನೆಕಾರರ ಕ್ರಿಯಾ ಸಮಿತಿಯ ಸಭೆ ನಡೆಯಿತು. ಈ ಸಭೆಯ ಅಧ್ಯಕ್ಷತೆಯನ್ನು ಮುಖಂಡರಾದ ಬಾಬರ್ ಪಾಷಾ ರವರು ವಹಿಸಿದ್ದರು.**

ಈ ಕಾರ್ಯಕ್ರಮವನ್ನು ಉದ್ದೇಶಿಸಿ ಮಾತನಾಡಿದ ಪ್ರಗತಿಪರ ಸಂಘಟನೆಯ ಚಂದ್ರಶೇಖರ್ ಗೋರೆಬಾಳ್ ಇವರು ಕೇಂದ್ರ ಸರ್ಕಾರ ಜಾರಿಗೆ ತರುವುದಾಗಿ ಪ್ರಕಟಿಸಿರುವ ವಿಶೇಷ ಮತಪಟ್ಟಿ ಪರಿಷ್ಕರಣೆ (Special Electoral Roll Revision ? SIR) ಬಗ್ಗೆ ದೇಶದ ಜನರಿಗೆ ಗಂಭೀರ ಪರಿಣಾಮ ಬೀರುವ ಸಾಧ್ಯತೆಗಳಿದೆ. ಇದರ ಸಾದ್ಯ?ಸಾದ್ಯತೆಗಳು, ಅದರ ಮೂಲಕ ಉಂಟಾಗಬಹುದಾದ ಮಾರಕ ಪರಿಣಾಮಗಳು, ಮತ್ತು ಸಮುದಾಯಗಳ ಮೇಲೆ ಬೀರುವ ಪ್ರಭಾವವನ್ನು ಸಮಗ್ರವಾಗಿ ವಿಶ್ಲೇಷಿಸುವ ಅಗತ್ಯ ಹೆಚ್ಚುತ್ತಿದೆ.

ಈ ಕುರಿತು ಜಾಗೃತಿ ಮೂಡಿಸುವ ಅವಶ್ಯಕತೆಯಿದೆ ಎಂದು ತಿಳಿಸಿದರು. ನಂತರ ಈ ಸಭೆಯನ್ನು ಉದ್ದೇಶಿಸಿ ಮಾತನಾಡಿದ ಜಮಾತೆ ಇಸ್ಲಾಮಿ ಹಿಂದ್ ಅಧ್ಯಕ್ಷರಾದ ಹುಸೇನ್ ಸಾಬ್ ಇವರು SIR ಕುರಿತು ಜಾಗೃತಿ ಮೂಡಿಸುವ ಈ ಮಹತ್ವದ ವಿಷಯದ ಕುರಿತಂತೆ ಸಿಂಧನೂರಿನ ಮುಸ್ಲಿಂ ಸಮುದಾಯ ಹಾಗೂ ವಿವಿಧ ಸಮಾನ ವಯಸ್ಕರ ಸಂಘಟನೆಗಳು ಪ್ರಗತಿಪರ ಶಕ್ತಿಗಳು ಜಂಟಿ ಕ್ರಿಯಾ ಸಮಿತಿ ಒಂದು ಸಂವಾದವನ್ನು ಏರ್ಪಡಿಸುವ ಕುರಿತು ತೀವ್ರ ಚಿಂತನೆ ನಡೆಸಿದೆ. ರಾಜ್ಯ?ರಾಷ್ಟ್ರ ಮಟ್ಟದಲ್ಲಿ ನಡೆಯುತ್ತಿರುವ ಚರ್ಚೆಗಳ ನಡುವೆಯೇ, ಸ್ಥಳೀಯವಾಗಿ ವಿಷಯದ ಅರಿವು ಮೂಡಿಸಲು, ಜನರಲ್ಲಿ ಜಾಗೃತಿ ತರಲು ಮತ್ತು ಸಮಾಜದ ಒಗ್ಗಟ್ಟಿನ ಧ್ವನಿ ರೂಪಿಸಲು ವಿವಿಧ ಸಮಾನ ಮನಸ್ಕ ಸಂಘಟನೆಗಳು, ಪ್ರಗತಿಪರ ಶಕ್ತಿಗಳು ಮತ್ತು ಹಿತಾಸಕ್ತರನ್ನು ಒಂದೇ ವೇದಿಕೆಯಡಿ ತರಬೇಕೆಂಬುದು ಜಂಟಿ ಸಮಿತಿಯ ಉದ್ದೇಶ.

ಈ ಸರ್ವಾನುಮತದ ಆಧಾರದ ಮೇಲೆ ಈ ಸಮಿತಿಗೆ "ಮತದಾರರ ಪಟ್ಟಿಯ ಪರಿಷ್ಕರಣ ಜಾಗೃತ ವೇದಿಕೆ" ಎಂಬ ಹೆಸರನ್ನು ನೀಡಲಾಗಿದೆ. ಜನವರಿ 11 ರ ರವಿವಾರ ಜಾಗೃತಿ ಹಾಗೂ ಸಂವಾದ ಕಾರ್ಯಕ್ರಮವನ್ನು ಹಮ್ಮಿಕೊಂಡಿದ್ದು, ಈ ಸಂವಾದದಲ್ಲಿ ಗಣ್ಯ ವಿಚಾರವಾದಿ, ಲೇಖಕ ಹಾಗೂ ಸಾಮಾಜಿಕ ಚಿಂತಕರಾದ ಶ್ರೀ ಶಿವಸುಂದರ್ ಹಾಗೂ ಅನೇಕ ಸಕ್ರಿಯ ಸಾಮಾಜಿಕ ಮುಖಂಡರು ಭಾಗವಹಿಸಿ SIRನ ಕಾನೂನು, ಸಾಮಾಜಿಕ, ರಾಜಕೀಯ ಹಾಗೂ ಮಾನವೀಯ ಅಂಶಗಳ ಕುರಿತು ತಮ್ಮ ಅಭಿಪ್ರಾಯ ಹಂಚಿಕೊಳ್ಳಲಿದ್ದಾರೆ. ಹಾಗೂ ಖಿಖಿಖಿ ನ ಸಂವಾದ ಕಾರ್ಯಕ್ರಮ ಈ ಸಭೆಯು ಜನರ ಚಿಂತನೆಗೆ ಸ್ಪಂದಿಸುವಂತಹ ಮಹತ್ವದ ವೇದಿಕೆಯಾಗಿ ರೂಪುಗೊಳ್ಳಲಿದೆ. ಎಂದು ತಿಳಿಸಿದರು.

ಈ ಕಾರ್ಯಕ್ರಮದಲ್ಲಿ ಬಾಬರ್ ಪಾಷಾ ಮುಖಂಡರು , ಪ್ರಗತಿಪರ ಸಂಘಟನೆಗಳ ಒಕ್ಕೂಟದ ಚಂದ್ರಶೇಖರ್ ಗೋರೆಬಾಳ್ , ಹುಸೇನ್ ಸಾಬ್ ಅಧ್ಯಕ್ಷರು ಜಮಾತೆ ಇಸ್ಲಾಮ್ ಹಿಂದ್ ಸಿಂಧನೂರು , ಸಿಪಿಐ(ಎಂ)ನ ಬಸವಂತರಾಯಗೌಡ ಕಲ್ಲೂರು, ಮನುಜಮತ ಬಳಗದ ಬಸವರಾಜ ಬಾದರ್ಲಿ,ಮುಖಂಡರು ಜಾಫರ್ ಜಹಾಗಿರ್ದಾರ್, ಕೃಷ್ಣಮೂರ್ತಿ ಧುಮತಿ, ಮನುಜಮತ ಬಳಗದ ಬಸವರಾಜ ಬಾದರ್ಲಿ,, ಮೊಹಸಿನ್ ಖಾದ್ರಿ , ಇರ್ಫಾನ್ ಕೆ ಅಧ್ಯಕ್ಷರು ಸನ್ ರೈಸ್ ಶಿಕ್ಷಣ ಸಂಸ್ಥೆ ಹಾಗೂ ಸಂಪಾದಕರು ನೈಜ್ಯ ದಸೆ ಕನ್ನಡ ದಿನಪತ್ರಿಕೆ , ಆಬುಲೈಸ್ ನಾಯ್ಕ್ ,ಓಟುಜಚಿಡುಣಥಿ ಯೂಥ್ ಮೂವ್ಮೆಂಟ್ ,ನಿಸಾರ್ ಖಾನ್ , ತನ್ವೀರ್, ಅಮ್ಜದ್, ಶಫಿ ಖಾನ್, ಶೋಹೇಲ್ ದೇಸಾಯಿ, ಮೊಹಮ್ಮದ್ , ಲಿಯಾಖತ್ , ಸರ್ಫರಾಜ್ ಖಾನ್, ಖಾಜಿ ಜಾವೇದ್, ಇನ್ನಿತರ ಸಂಘಟನೆಯ ಮುಖಂಡರು ಉಪಸ್ಥಿತರಿದ್ದರು.

**ಈ ಕಾರ್ಯಕ್ರಮದಲ್ಲಿ ವೇದಿಕೆಯ ಆಶಯ?
ಸಾಮಾಜಿಕ SIR ಬಗ್ಗೆ ಜಾಗೃತಿ ಮೂಡಿಸುವದು
ಮತದಾರರ ಪಟ್ಟಿಯ ಸಂಶೋಧನೆಯಲ್ಲಿ ನ್ಯಾಯ, ಪಾರದರ್ಶಕತೆ ಮತ್ತು ಸಮಾನತೆಯನ್ನು ಒತ್ತಿ ಹೇಳುವುದು ಜನರ ಹಕ್ಕು?ಸ್ವತಂತ್ರ್ಯಗಳ ರಕ್ಷಣೆಗೆ ಒಗ್ಗಟ್ಟಿನಿಂದ ಚಿಂತನೆ ಮಾಡುವುದು ಶಾಂತಿ, ಸಹಿಷ್ಣುತೆ ಮತ್ತು ಪ್ರಜಾಪ್ರಭುತ್ವದ ಮೌಲ್ಯಗಳನ್ನು ಬಲಪಡಿಸುವದು ಎಲ್ಲರ ಸಹಕಾರ ? ಸಮಾಜದ ಬಲ ಎಲ್ಲರ ಭಾಗವಹಿಸುವುದು.**


**ಈ ಸಂವಾದ ಕಾರ್ಯಕ್ರಮದ ರೂಪರೇಷೆಗಳ ಬಗ್ಗೆ ಪೂರ್ವಭಾವಿ ಸಭೆ ಆಹ್ವಾನ
ಮುಂದಿನ ಕ್ರಮಗಳ ರೂಪುರೇಷೆ ಸಿದ್ಧಪಡಿಸುವ ಸಲುವಾಗಿ, ವೇದಿಕೆಯ ಪದಾಧಿಕಾರಿಗಳ ಆಯ್ಕೆ ಮತ್ತು ಸಂವಾದದ ಸಕಲ ವ್ಯವಸ್ಥೆಗಳ ಬಗ್ಗೆ ಚರ್ಚಿಸಲು ದಿನಾಂಕ: ಜನವರಿ 08
ಸಮಯ: ಸಂಜೆ 4:00 ಗಂಟೆ, ಸ್ಥಳ: ಮಿಲಾಪ್ ಶಾದಿ ಮಹಲ್, ಸಿಂಧನೂರು ಈ ಸಭೆಯಲ್ಲಿ
ಸಮಾನ ಮನಸ್ಕ ಸಂಘಟನೆಗಳ ಪ್ರತಿನಿಧಿಗಳು
ಸಾಮಾಜಿಕ ಸಂಘಟಕರು ವಿವಿಧ ಸಮುದಾಯಗಳ ಮುಖಂಡರು, ಎಲ್ಲಾ ಸಂಘ ಸಂಸ್ಥೆಯ ಪದಾಧಿಕಾರಿಗಳು, ಸಾಮಾಜಿಕ ಚಳವಳಿಗಳ ಕಾರ್ಯಕರ್ತರು, ಬೌದ್ಧಿಕ ವಲಯದ ಸ್ನೇಹಿತರು
ಅವಶ್ಯವಾಗಿ ಹಾಜರಾಗುವಂತೆ ವಿನಂತಿ.**

# ಕೆಕೆಆರ್ಟಿಸಿ ಸಹಾಯಕ ಲೆಕ್ಕಿಗ ಹುದ್ದೆಗೆ ಆಯ್ಕೆಯಾದ ಗ್ರಾಮೀಣ ಪ್ರತಿಭೆ ಪ್ರತಾಪ್

❑ ನೈಜ್ಯ ದೆಸೆ ನ್ಯೂಸ್

**ಬುದ್ದಿನ್ನಿ: ಪ್ರತಾಪ ತಂದೆ ಯಮನಪ್ಪ ಇವರು ರಾಯಚೂರು ಜಿಲ್ಲೆ ಮಸ್ಕಿ ತಾಲ್ಲೂಕು ಬುದ್ದಿನ್ನಿ(ಖ) ಗ್ರಾಮದವರು.ಪ್ರಾಥಮಿಕ ಶಿಕ್ಷಣ ತಮ್ಮ ಊರಿನಲ್ಲಿ ಪಡೆದು ಪ್ರೌಢ ಶಿಕ್ಷಣ ವೀರೇಶ್ವರ ಪ್ರೌಢ ಶಾಲೆಯಲ್ಲಿ ಪಡೆದು ಪದವಿ ಪೂರ್ವ ಶಿಕ್ಷಣ ವೀರಮ್ಮ ವಸ್ತ್ರದ ಪದವಿ ಪೂರ್ವ ಕಾಲೇಜಿನಲ್ಲಿ ಪಡೆದು ಪದವಿ ಪ್ರೆಸಿಡೆನ್ಸಿ ಕಾಲೇಜು ಮಾಸ್ಕಿಯಲ್ಲಿ ಪಡೆದು.ಪ್ರತಾಪ್ ಎಂಬ ಯುವಕ ಶಾಲಾ ಕಾಲೇಜು ದಿನಗಳಲ್ಲಿ ಕೂಡಾ ನಿರಂತರವಾಗಿ ಸ್ಪರ್ಧಾತ್ಮಕ ಪರೀಕ್ಷೆ ತಯಾರಿಯನ್ನು ನಡೆಸುತ್ತಿದ್ದರು.**

ಮತ್ತು ಇವರು ಏಂಖ ಮತ್ತು ಹತ್ತು ಹಲವಾರು ಹುದ್ದೆಗಳಿಗೂ ಕೂಡಾ ಪ್ರಯತ್ನ ಮಾಡಿದರು ಆದರೆ ಪ್ರಯತ್ನ ವಿಫಲವಾಯಿತು ಆದರೂ ಪ್ರತಾಪ ಇವರು ಓದುವನ್ನು ಬಿಡಲಿಲ್ಲ ಓದಿನಲ್ಲಿ ಮುಂದುವರಿದರೂ. ನಿರಂತರ



Government of Karnataka
KARNATAKA EXAMIANTION AUT...
VARIOUS DEPARTMENT RECRUITMENT POSTS - EXA... ...ON 2025-26 (KALYANA KARNATAKA)
Kalyana Karnataka R... ...ransport Corporation
PR... ...ONAL SCORE LIST

Post Name -> Assistant Accountant -HK POST

| Sl.No. | APPLICATION NUMBER | Candidate Name | PAPER 1 | PAPER 2 | TOTAL |
|---|---|---|---|---|---|
| 1 | KEARC0000030785 | PRATAP | 58 | 69.75 | 127.75 |
| 2 | KEARC0000000498 | SUNDARRAJ | 63.5 | 63.25 | 126.75 |
| 3 | KEARC0000001692 | JYOTI | 57.75 | 64.25 | 122 |
| 4 | KEARC0000002440 | BASAVARAJA | 65 | 56.25 | 121.25 |
| 5 | KEARC0000008599 | N RAMAKRISHNA | 55.75 | 64.75 | 120.5 |
| 6 | KEARC0000014684 | SHARANABASAPPA BANDAGAR | 60.75 | 59.5 | 120.25 |
| 7 | KEARC0000001567 | NAGALINGAPPA B K | 56.75 | 63 | 119.75 |
| 8 | KEARC0000004846 | LAKSHMI | 58.5 | 60 | 118.5 |
| 9 | KEARC0000005016 | YAMANOORAPPA | 54.25 | 62.5 | 116.75 |
| 10 | KEARC0000006043 | G DEVARAJ | 56.25 | 58.75 | 115 |
| 11 | KEARC0000000427 | MALLANNA | 59.25 | 55.5 | 114.75 |
| 12 | KEARC0000001923 | NAVEEN KULKARNI | 62 | 52.25 | 114.25 |
| 13 | KEARC0000041278 | VATAMNAHALLI ANILAKUMARA | 55.25 | 58.75 | 114 |
| 14 | KEARC0000007032 | NAGARAJ | 52.5 | 60.75 | 113.25 |
| 15 | KEARC0000009823 | BHAGAVANTARAY | 56 | 57 | 113 |
| 16 | KEARC0000002148 | KORESH | 54 | 58.5 | 112.5 |
| 17 | KEARC0000003577 | REVANASIDDA | 52.5 | 60 | 112.5 |
| 18 | KEARC0000007080 | S GANGADHARA | 51.75 | 60.75 | 112.5 |
| 19 | KEARC0000013037 | S.AMARESH | 50 | 62.25 | 112.25 |
| 20 | KEARC0000004319 | SUNILKUMAR T | 50.5 | 61.25 | 111.75 |
| 21 | KEARC0000293818 | GADDERU DURGAPRASADA | 57.5 | 53.75 | 111.25 |
| 22 | KEARC0000327032 | YASHODHA | 51 | 60.25 | 111.25 |
| 23 | KEARC0000334814 | SACHIN | 62 | 49 | 111 |
| 24 | KEARC0000000985 | DEEPAK | 54 | 55.75 | 109.75 |

Page 1 of 29

ಪ್ರಯತ್ನ,ಓದುವಿಕೆಯಿಂದ ಇಂದು ಕೆಕೆಆರ್ಟಿಸಿ ಸಹಾಯಕ ಲೆಕ್ಕಿಗ ಹುದ್ದೆಗೆ ಆಯ್ಕೆಯಾದ ಪ್ರತಾಪ್ ಇವರಿಗೆ ಆತ್ಮೀಯ ಗೆಳೆಯರಾದ ಬಸವರಾಜ ದೇವರಮನಿ,ಪ್ರಶಾಂತ್, ಅರುಣ್, ವಿನೋದ್, ಮೆಹಬೂಬ್,ಇಸಾಕ್ ಅತ್ತಾರ್ ಬಳಗಾನೂರ, ನಿಖಿಲ್ ಶೆಟ್ಟಿ,ಸಿದ್ದನಗೌಡ, ಹಂಪನಗೌಡ, ಉಮೇರ್ ಅತ್ತಾರ ಬಳಗಾನೂರ,ರಮೇಶ್ ಉಪ್ಪಲದೊಡ್ಡಿ, ಸಮೀರ್ ಬಳಗಾನೂರು,ಸಿದ್ದಣ್ಣ, ರಾಘವೇಂದ್ರ,ಧರೆಸಾಬ್. ನಿಂಗಣ್ಣ,ಇವರೆಲ್ಲರು ಅಭಿನಂದಿಸಿ ನಮ್ಮ ಗೆಳೆಯ ಚಿಕ್ಕ ವಯಸ್ಸಿನಲ್ಲಿ ಸರ್ಕಾರಿ ನೌಕರಿ ತೆಗೆದುಕೊಂಡಿರುವುದು ಖುಷಿಯ ಸಂಗತಿ ಎಂದು ಹರ್ಷ ವ್ಯಕ್ತಪಡಿಸಿದ್ದಾರೆ.



# ಮಕ್ಕಳ ಜೀವನದ ಗುರಿಸಾಧನೆಗೆ ಬಾಲ್ಯವಿವಾಹದಿಂದ ಅಡ್ಡಿ: ಡಾ ರಮೇಶ

❑ ನೈಜ್ಯ ದೆಸೆ ನ್ಯೂಸ್

**ರಾಯಚೂರು: ಜನವರಿ 07 (ಕರ್ನಾಟಕ ವಾರ್ತೆ): ಬಾಲ್ಯ ವಿವಾಹವು ಮುಖ್ಯವಾಗಿ ಹೆಣ್ಣುಮಕ್ಕಳ ಶಿಕ್ಷಣ, ಆರೋಗ್ಯ ಮತ್ತು ಭವಿಷ್ಯದ ಮೇಲೆ ಗಂಭೀರ ಪರಿಣಾಮ ಬೀರುತ್ತದೆ. ಅಲ್ಲದೆ ಪಾಲಕರು ತಮ್ಮ ಮಗಳು ಅಥವಾ ಮಗನಿಗೆ ಬಾಲ್ಯ ವಿವಾಹ ಮಾಡುವುದರಿಂದ ಅವರ ಉನ್ನತ ಸಾಧನೆಗೆ ಪಾಲಕರೆ ಅಡ್ಡಿಪಡಿಸಿದಂತೆ, ಮಕ್ಕಳ ಜೀವನದ ಉನ್ನತ ಗುರಿ ಸಾಧನೆಗಾಗಿ ಹೆಣ್ಣಿಗೆ 18 ವರ್ಷ ಗಂಡಿಗೆ 21 ವರ್ಷ ತುಂಬುವವರೆಗೂ ಮದುವೆ ಮಾಡದಂತೆ ಮುಂದಾಗಬೇಕು ಎಂದು ಕಲ್ಮಲ ಪ್ರಾಥಮಿಕ ಆರೋಗ್ಯ ಕೇಂದ್ರದ ಆಡಳಿತ ವೈದ್ಯಾಧಿಕಾರಿ ಡಾ.ರಮೇಶ್ ತಿಳಿಸಿದರು.**

ಜಿಲ್ಲಾಡಳಿತ, ಜಿಲ್ಲಾ ಪಂಚಾಯತ, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ಹಾಗೂ ಶಿಕ್ಷಣ ಇಲಾಖೆ ಸಂಯೋಗದಲ್ಲಿ ಇತ್ತಿಚೀಗೆ ತಾಲೂಕಿನ ಕಲ್ಮಲ ಗ್ರಾಮದ ಮೇಟ್ರಿಕ್ ಪೂರ್ವ ವಸತಿ ನಿಲಯದಲ್ಲಿ ಪ್ರೌಢ ಶಾಲಾ ಮಕ್ಕಳಿಗೆ ಹಮ್ಮಿಕೊಂಡ ಬಾಲ್ಯವಿವಾಹ ತಡೆ ಹಾಗೂ ಪೋಕ್ಸೊ ಕಾಯ್ದೆಯ ಜಾಗೃತಿ ಕುರಿತು ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು. ಮುಖ್ಯವಾಗಿ ಹೆಣ್ಣು ಮಕ್ಕಳಿಗೆ ಋತುಚಕ್ರ ಆರಂಭವಾದ ತಕ್ಷಣ ಮದುವೆ ಮಾಡುವ ದುಡುಕಿನ ನಿರ್ಧಾರಗಳಿಂದ ದೈಹಿಕವಾಗಿ ಗರ್ಭಕೋಶವು ಪೂರ್ಣ ಪ್ರಮಾಣದಲ್ಲಿ ಬೆಳವಣಿಗೆಯಾಗದೆ ಗರ್ಭಪಾತ, ಮಗು ಸತ್ತು ಹುಟ್ಟುವುದು, ದಿನತುಂಬದ ಹೆರಿಗೆ, ಬಾಲ್ಯದಲ್ಲಿ ಅಪೌಷ್ಟಿಕತೆ, ಅಕಾಲಿಕ ಗರ್ಭಧಾರಣೆ, ಹೆರಿಗೆಯಲ್ಲಿನ ತೊಡಕುಗಳು, ಮಗುವಿನ ಲಾಲನೆ ಪಾಲನೆಯ ಮಾಹಿತಿ ಕೊರತೆ ಕಾರಣದಿಂದ ಮಗು ಅಪೌಷ್ಟಿಕತೆಗೆ ತುತ್ತಾಗುತ್ತದೆ.




ಈ ಹಿನ್ನಲೆ ಬಾಲ್ಯ ವಿವಾಹ ತಡೆ ಎಲ್ಲರೂ ಶ್ರಮಿಸೋಣವೆಂದು ತಿಳಿಸಿದರು. ಶಾಲಾ ಮುಖ್ಯಗುರು ಚಿತ್ರಾಬಾಯಿ ಮಾತನಾಡಿ ಬಾಲ್ಯದಲ್ಲಿ ಮದುವೆ ಮಾಡುವುದರಿಂದ ಹೆಣ್ಣು ಮಗು ಕೌಟುಂಬಿಕ ಹಿಂಸೆ ಮತ್ತು ಮಾನಸಿಕ ಸಮಸ್ಯೆಗಳಿಗೆ ಕಾರಣವಾಗುತ್ತದೆ. ಅಲ್ಲದೆ ಇದು ಮಕ್ಕಳ ಹಕ್ಕುಗಳ ಉಲ್ಲಂಘನೆಯಾಗಿದ್ದು, ಸಾಮಾಜಿಕ ಮತ್ತು ಆರ್ಥಿಕ ಪ್ರಗತಿಗೆ ಅಡ್ಡಿ. ಅಲ್ಲದೆ ಹೆಣ್ಣು ಮಗುವಿಗೆ 18 ವರ್ಷ ತುಂಬುವುದರೊಳಗೆ ಮದುವೆ ಮಾಡಿದಲ್ಲಿ ಬಾಲ್ಯ ವಿವಾಹ ನಿಷೇಧ ಕಾಯ್ದೆ–2006ರ ಪ್ರಕಾರ ಗಂಡಿನ ಮನೆಯವರಿಗೆ, ಮದುವೆ ಮಾಡಿಸಿದವರಿಗೆ, ಭಾಗಿಯಾದವರಿಗೆ 1 ಲಕ್ಷ ದಂಡ ಹಾಗೂ 2 ವರ್ಷ ಜೈಲು ಶಿಕ್ಷೆ ವಿಧಿಸಲಾಗುವುದು ಎಂಬುದನ್ನು ಪ್ರತಿಯೊಬ್ಬರೂ ಅರಿತುಕೊಳ್ಳಬೇಕಿದೆ ಎಂದರು.

ಈ ವೇಳೆ ಉಪ ಜಿಲ್ಲಾ ಆರೋಗ್ಯ ಶಿಕ್ಷಣಾಧಿಕಾರಿ ಬಸಯ್ಯ ಅವರು ಮಾತನಾಡಿ,



ಪ್ರತಿ ಮನುಷ್ಯನ ಜೀವನದಲ್ಲಿ ಸಾಮಾನ್ಯವಾಗಿ 10–19 ವರ್ಷಗಳ ವಯೋಮಾನ ಅತ್ಯಂತ ಸೂಕ್ಷ್ಮ ಕಾಲ ಘಟ್ಟವಾಗಿದೆ. ಈ ಹಂತದಲ್ಲಿ ಹಾರ್ಮೋನುಗಳ ಬದಲಾವಣೆಯೊಂದಿಗೆ ಉಂಟಾಗುವ ಧ್ವನಿ ಬದಲಾವಣೆ, ಬಾಲಕರಲ್ಲಿ ಮೀಸೆ ಗಡ್ಡಗಳ ಕಾಣಿಸುವಿಕೆ, ಬಾಲಕಿಯರಲ್ಲಿ ಋತುಚಕ್ರ ಆರಂಭವಾಗುವ ಜೊತೆಗೆ ದೈಹಿಕ ಬದಲಾವಣೆ, ಕಂಕುಳದಲ್ಲಿ ಕೂದಲುಗಳ ಕಾಣಿಸುವಿಕೆ ಸೇರಿದಂತೆ ಮುಖದಲ್ಲಿ ಮೊಡುವೆಗಳು ಕಂಡು ಬರಲಾರಂಬಿಸುತ್ತವೆ. ಇವೆಲ್ಲವುಗಳು ಹದಿಹರೆಯದ ಸಂಕೇತವಾದರೆ, ದೈಹಿಕ ಆಕರ್ಷಣೆಗೆ ಒಳಗಾಗುವ ಸೂಕ್ಷ್ಮ ಅಂಶದ ಕುರಿತು ಅದರ ಸಾಧಕ–ಭಾದಕಗಳ ಬಗ್ಗೆ ಹೆಚ್ಚು ಜಾಗೃತಿ ವಹಿಸಬೇಕಿದೆ.

ಅಲ್ಲದೆ ಮಕ್ಕಳ ಏಳ್ಗೆಗಾಗಿ ಹಗಲಿರಳು ತಂದೆ–ತಾಯಿ ಶ್ರಮಿಸುವುದನ್ನು ನಾವು ಕಾಣುತ್ತೇವೆ. ಮಕ್ಕಳು ಉನ್ನತ ಹುದ್ದೆ, ಸ್ಥಾನಮಾನ ಪಡೆಯಲಿ ಎಂಬ ಮಹಾದಾಸೆ ಇರುತ್ತದೆ. ಈ ದಿಶೆಯಲ್ಲಿ ಸರಿಯಾದ ಪೌಷ್ಟಿಕಾಹಾರ ಸೇವನೆ, ವ್ಯಾಯಾಮ, ಯೋಗಗಳೊಂದಿಗೆ ಶ್ರದ್ಧೆಯಿಂದ ಓದಿನ ಕಡೆ ಗಮನ ನೀಡುವ ಮೂಲಕ ಪ್ರತಿ ಆರು ತಿಂಗಳಿಗೊಮ್ಮೆ ಜಂತುಹುಳು ಮಾತ್ರೆ, ಪ್ರತಿವಾರಕ್ಕೊಮ್ಮೆ ಕಬ್ಬಿಣಾಂಶ ಮಾತ್ರೆ ಸೇವಿಸಿ ದೇಹದಲ್ಲಿ ಕಬ್ಬಿಣಾಂಶದ ಕೊರತೆಯಾಗದಂತೆ ಮುತವರ್ಜಿ ವಹಿಸಬೇಕೆಂದರು.

ಸ್ನೇಹಾ ಕ್ಲಿನಿಕ್ ಸದ್ಬಳಕೆ ಮಾಡಿಕೊಳ್ಳಿ: ರಾಷ್ಟ್ರೀಯ ಕಿಶೋರಿ ಸ್ವಾಸ್ತ್ಯ ಕಾರ್ಯಕ್ರಮದಡಿಯಲ್ಲಿ ಸ್ನೇಹಾ ಕ್ಲಿನಿಕ್‌ಗಳ ಮೂಲಕ ಹದಿಹರೆಯದ ಆರೋಗ್ಯ ಸಮಸ್ಯೆಗಳಿಗೆ ಆಪ್ತ ಸಮಾಲೋಚನೆಗಾಗಿ ಆರೋಗ್ಯ ಕೇಂದ್ರಗಳಲ್ಲಿ ಅವಕಾಶ ಕಲ್ಪಿಸಿದ್ದು, ಇದರ ಸದುಪಯೋಗ ಪಡೆದುಕೊಳ್ಳಲು ಹಾಗೂ ತಂಬಾಕು ಉತ್ಪನ್ನಗಳ ಸೇವನೆಯ ದುಷ್ಪರಿಣಾಮಗಳ ಬಗ್ಗೆ ತಿಳಿಸಲಾಯಿತು. ಇದೇ ಸಂದರ್ಭದಲ್ಲಿ ಜಿಲ್ಲಾ ಆರೋಗ್ಯ ಶಿಕ್ಷಣಾಧಿಕಾರಿ ಈಶ್ವರ ಹೆಚ್ ದಾಸಪ್ಪನವರ, ನಿಲಯ ಪಾಲಕರಾದ ರಂಗನಾಥ, ಕ್ಷೇತ್ರ ಆರೋಗ್ಯ ಶಿಕ್ಷಣಾಧಿಕಾರಿ ಸರೋಜಾ ಕೆ, ಹಿರಿಯ ಆರೋಗ್ಯ ನಿರಿಕ್ಷಣಾಧಿಕಾರಿ ಭಾನುಕಾಂತ ರೆಡ್ಡಿ, ಹಿರಿಯ ಪಿಹೆಚ್‌ಸಿಓ ರೇಣುಕಾ, ಶಿಕ್ಷಕರಾದ ರಮೇಶ, ಪಿಹೆಚ್‌ಸಿಓ ರಸೂಲ್‌ಬಿ, ಹೆಚ್‌ಐಓ ಮಹಾಲಕ್ಷ್ಮಿ, ಆಶಾ ಕಾರ್ಯಕರ್ತೆ ಶಂಕ್ರಮ್ಮ, ನಾಗಮ್ಮ ಸೇರಿದಂತೆ ಶಾಲಾ ಮಕ್ಕಳು ಇದ್ದರು.